# ಹಂಪಿ ಟೈಮ್ಸ್
HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

epaper.hampitimes.com | e-mail: hampitimes@gmail.com | M:94486 33038 Reg.No.PMG/KA/NK/BLY/01/2024-2026



Grow with Us, Advertise in Hampi Times
Print & Digital Media



“Looking to bring your sales and services to readers Fingertips? HAMPI TIMES is the ideal platform”

Call:9448633038/email:hampitimes@gmail.com



ಸಂಪುಟ:02 • ಸಂಚಿಕೆ: 307 • ಪಿ.ಆರ್.ಜಿ.ಐ.ನಂ.:KARKAN/2023/88055 • ವಿಜಯನಗರ • 17.06.2025 • ಮಂಗಳವಾರ • ಪುಟ:04 • ಬೆಲೆ:2
Volume:02 • Issue: 307 • PRGI No:KARKAN/2023/88055 • VIJAYANAGARA • 17.06.2025 • Tuesday • Page:04 • Rs:2


# ಪ್ರಧಾನಮಂತ್ರಿ ಉಜ್ವಲ ಯೋಜನೆಯ ಇ-ಕೆವೈಸಿ ಸರ್ವರ್ ಸಮಸ್ಯೆಗೆ ಫಲಾನುಭವಿಗಳ ಪರದಾಟ

## ಇ–ಕೆವೈಸಿ ಕೇಂದ್ರಗಳ ಸಂಖ್ಯೆ ಹೆಚ್ಚಳಕ್ಕೆ ಆಗ್ರಹ | ಸರ್ವರ್ ಸಮಸ್ಯೆಯನ್ನು ಬಗೆಹರಿಸಿ | ದಿನಗೂಲಿಗಳ ಕೂಲಿಗೂ ಕತ್ತರಿ

■ **ಹಂಪಿ ಟೈಮ್ಸ್ ಮರಿಯಮ್ಮನಹಳ್ಳಿ**

ಪ್ರಧಾನಮಂತ್ರಿ ಉಜ್ವಲ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಮಾಡಿಸಬೇಕಾದ ಇ–ಕೆವೈಸಿ (e-KYC) ಪ್ರಕ್ರಿಯೆ ಸರ್ವರ್ ಸಮಸ್ಯೆ ಮತ್ತು ಹೆಚ್ಚುವರಿ ಕೇಂದ್ರಗಳ ಕೊರತೆಯಿಂದಾಗಿ ಭಾರೀ ವಿಳಂಬವಾಗುತ್ತಿದೆ. ಇ–ಕೆವೈಸಿ ಮಾಡಿಸಲು ಬಂದ ಫಲಾನುಭವಿಗಳು ಗಂಟೆಗಟ್ಟಲೆ ಸರತಿಯಲ್ಲಿ ನಿಂತು ಹೈರಾಣಾಗುತ್ತಿದ್ದು, ಹೆಚ್ಚುವರಿ ಕೇಂದ್ರಗಳನ್ನು ತೆರೆಯುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

ಪಟ್ಟಣದ ಗ್ಯಾಸ್ ಏಜೆನ್ಸಿಯೊಂದರ ಮುಂದೆ ಬೆಳಗ್ಗೆಯಿಂದಲೇ ನೂರಾರು ಮಹಿಳೆಯರು ಇ–ಕೆವೈಸಿ ಮಾಡಿಸಲು ಜಮಾಯಿಸುತ್ತಿದ್ದಾರೆ. ಸುತ್ತಮುತ್ತಲಿನ ಹಳ್ಳಿಗಳು ಸೇರಿದಂತೆ ಸುಮಾರು 6 ಸಾವಿರಕ್ಕೂ ಅಧಿಕ ಫಲಾನುಭವಿಗಳಿದ್ದಾರೆ. ಸರ್ವರ್ ನಿಧಾನಗತಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ದಿನಕ್ಕೆ ಇ–ಕೆವೈಸಿ ಮಾಡಿಸುವವ ಸಂಖ್ಯೆ 300 ನೋಂದಣಿ ಅಪ್ಡೇಟ್ ದಾಟುತ್ತಿಲ್ಲ. ಇದರಿಂದಾಗಿ, ದೂರದ ಗ್ರಾಮಗಳಿಂದ ಬರುವ ಫಲಾನುಭವಿಗಳು ದಿನವಿಡೀ ಕಾಯ್ದು, ಕೆಲಸವಾಗದೆ ನಿರಾಸೆಯಿಂದ ಹಿಂದಿರುಗುವಂತಾಗಿದೆ.

"ಬೆಳಗ್ಗೆ 8 ಗಂಟೆಗೆ ಬಂದಿದ್ದೇವೆ, ಈಗ ಮಧ್ಯಾಹ್ನ 2 ಗಂಟೆಯಾದರೂ ನಮ್ಮ ಸರದಿ ಬಂದಿಲ್ಲ. ಸರ್ವರ್ ತುಂಬಾ ನಿಧಾನವಾಗಿದೆ ಎಂದು ಹೇಳುತ್ತಿದ್ದಾರೆ. ಉಪವಾಸವಿದ್ದು ಕಾಯುತ್ತಿದ್ದೇವೆ" ಎಂದು ಇ–ಕೆವೈಸಿ ಮಾಡಿಸಲು ಬಂದಿದ್ದವರು ಅಳಲು ತೋಡಿಕೊಂಡರು. ಹಳ್ಳಿಗಳಿಂದ ಆಟೋ ಮಾಡಿಕೊಂಡು ಬಂದಿದ್ದೇವೆ. ಒಂದು ದಿನದ ಕೂಲಿ ನಷ್ಟವಾಗಿದೆ. ಇಷ್ಟಾದರೂ ಕೆಲಸ ಆಗುತ್ತೋ ಇಲ್ಲವೋ ಗೊತ್ತಿಲ್ಲ" ಎಂದು ಮತ್ತೊಬ್ಬ ಫಲಾನುಭವಿ ಬೇಸರ ವ್ಯಕ್ತಪಡಿಸಿದರು.




ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ ಗ್ಯಾಸ್ ಸಂಪರ್ಕ ಪಡೆದ ಫಲಾನುಭವಿಗಳು ತಮ್ಮ ಗುರುತನ್ನು ಅಪ್‌ಡೇಟ್ ಮಾಡಲು ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ. ಇ–ಕೆವೈಸಿ ಮಾಡಿಸದಿದ್ದರೆ ಗ್ಯಾಸ್ ಸಬ್ಸಿಡಿ ದೊರೆಯುವುದಿಲ್ಲ ಎಂದು ಎಚ್ಚರಿಕೆ ನೀಡಲಾಗಿದೆ. ಇದರಿಂದಾಗಿ, ಇ–ಕೆವೈಸಿ ಮಾಡಿಸಲು ಫಲಾನುಭವಿಗಳು ಗ್ಯಾಸ್ ಏಜೆನ್ಸಿಗಳತ್ತ ಮುಗಿಬೀಳುತ್ತಿದ್ದಾರೆ.

ಈ ಬಗ್ಗೆ ಗ್ಯಾಸ್ ಏಜೆನ್ಸಿ ಸಿಬ್ಬಂದಿಯೊಬ್ಬರನ್ನು ಸಂಪರ್ಕಿಸಿದಾಗ, "ನಮಗೆ ದಿನಕ್ಕೆ ಸೀಮಿತ ಸಂಖ್ಯೆಯ ಇ–ಕೆವೈಸಿ ಮಾಡಲು ಮಾತ್ರ ಅವಕಾಶವಿದೆ. ಸರ್ವರ್ ಸಮಸ್ಯೆ ದೊಡ್ಡದಾಗಿದ್ದು, ನಮ್ಮ ಕೈಯಲ್ಲಿ ಏನೂ ಇಲ್ಲ. ನಮಗೆ ಬಂದಿರುವ ಸೂಚನೆಯಂತೆ ಕೆಲಸ ಮಾಡುತ್ತಿದ್ದೇವೆ. ಫಲಾನುಭವಿಗಳಿಗೆ ಆಗುತ್ತಿರುವ ಅನಾನುಕೂಲತೆ ನಮಗೂ ಗೊತ್ತಿದೆ" ಎಂದು ತಿಳಿಸಿದರು.

> ಇ–ಕೆವೈಸಿ ಈಗ ಕಡ್ಡಾಯವಾಗಿದ್ದು, ಪ್ರತಿಯೊಬ್ಬ ಗ್ರಾಹಕರು ಇ–ಕೆವೈಸಿ ಮಾಡಿಸಬೇಕಿದೆ.ಉಜ್ವಲಾ ಹಾಗು ಕಡಿಮೆ ಸಬ್ಸಿಡಿಯ ಗ್ರಾಹಕರು, ಪಡಿತರ ಕಾರ್ಡುದಾರರೂ ಕೂಡ ಮುಂದಿನ ದಿನಗಳಲ್ಲಿ ಇ–ಕೆವೈಸಿ ಮಾಡಿಸಬೇಕಿದ್ದು, ಕೆಲವೆ ದಿನಗಳಲ್ಲಿ ಪ್ರಕಟಣೆ ನೀಡಲಾಗುವುದು.
>
> – **ರಿಯಾಜ್**, ಉಪನಿರ್ದೇಶಕರು, ಆಹಾರ ಮತ್ತು ಸರಬರಾಜು ಇಲಾಖೆ., ವಿಜಯನಗರ.

ಸ್ಥಳೀಯ ಆಡಳಿತ ಮತ್ತು ಸಂಬಂಧಪಟ್ಟ ಇಲಾಖೆಗಳು ಕೂಡಲೇ ಈ ಸಮಸ್ಯೆಗೆ ಸ್ಪಂದಿಸಿ, ಇ–ಕೆವೈಸಿ ಕೇಂದ್ರಗಳ ಸಂಖ್ಯೆಯನ್ನು ಹೆಚ್ಚಿಸಬೇಕು. ಅಲ್ಲದೆ, ಸರ್ವರ್ ಸಮಸ್ಯೆಯನ್ನು ಬಗೆಹರಿಸಿ, ಫಲಾನುಭವಿಗಳಿಗೆ ಸುಗಮವಾಗಿ ಇ–ಕೆವೈಸಿ ಮಾಡಿಸಲು ಅನುಕೂಲ ಕಲ್ಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಇಲ್ಲವಾದರೆ, ಬಡ ಫಲಾನುಭವಿಗಳಿಗೆ ಯೋಜನೆಯ ಲಾಭ ಸಂಪೂರ್ಣವಾಗಿ ದೊರೆಯುವುದು ಕಷ್ಟಕರವಾಗಬಹುದು ಎಂಬ ಆತಂಕ ವ್ಯಕ್ತವಾಗಿದೆ.

---

**ಮೈಕ್ರೋ ನ್ಯೂಸ್**

## ಇಂದು ಹೊಸಪೇಟೆಗೆ ಸಚಿವ ಸತೀಶ್ ಜಾರಿಕಿಹೊಳಿ ಆಗಮನ.

**ಹಂಪಿ ಟೈಮ್ಸ್ ಹೊಸಪೇಟೆ**

ವಿಜಯನಗರ ಜಿಲ್ಲಾ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನು ಜೂ.17 ರಂದು, ಬೆ.11 ಗಂಟೆಗೆ, ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಸಭೆಯಲ್ಲಿ ಲೋಕೋಪಯೋಗಿ ಸಚಿವರು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಿಹೊಳಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಸಭೆಯ ಬಳಿಕ ಮಧ್ಯಾಹ್ನ 3 ಗಂಟೆಗೆ ಕೂಡ್ಲಿಗಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಪ್ರಗತಿಯಲ್ಲಿರುವ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳ ಪರಿವೀಕ್ಷಣೆ ನಡೆಸಲಿದ್ದಾರೆ ಎಂದು ಆಪ್ತ ಕಾರ್ಯದರ್ಶಿ ಎನ್.ರಾಜಪ್ಪ ತಿಳಿಸಿದ್ದಾರೆ.

## ಜು.6 ಕ್ಕೆ ಪಂಚಮಸಾಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರಿಗೆ ಸನ್ಮಾನ

**ಹಂಪಿ ಟೈಮ್ಸ್ ಕೊಟ್ಟೂರು**

ನಗರದ ಬಸ್ ನಿಲ್ದಾಣ ಹಿಂಭಾಗ ಶ್ರೀ ಮರುಳಸಿದ್ದೇಶ್ವರ ಸಭಾಂಗಣದಲ್ಲಿ ಜುಲೈ 6ರಂದು ಪಂಚಮಸಾಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪಂಚಮಸಾಲಿ ಸಮಾಜದ ತಾಲೂಕು ಅಧ್ಯಕ್ಷ ಚಾಪಿ ಚಂದ್ರಪ್ಪ ಕಾರ್ಯದರ್ಶಿ ಹೆಚ್. ಅಶೋಕ ಹೇಳಿದರು.

2024–25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿಯಲ್ಲಿ ಶೇ.90 ಹಾಗೂ ಅಧಿಕ ಅಂಕಗಳನ್ನು ಪಡೆದ ತಾಲೂಕಿನ ಪಂಚಮಸಾಲಿ ಸಮಾಜದ ವಿದ್ಯಾರ್ಥಿಗಳನ್ನ ಹಾಗೂ 2024 ಜುಲೈ ಯಿಂದ 2025 ಜೂನ್ 30 ರಲ್ಲಿ ನಿವೃತ್ತರಾದ ಪಂಚಮಸಾಲಿ ನೌಕರರನ್ನು ಸನ್ಮಾನಿಸಲಾಗುವುದು. ಕಾರ್ಯಕ್ರಮದಲ್ಲಿ ಪಂಚಮಸಾಲಿ ಸಮಾಜದ ಹರಿಹರ ಪೀಠದ ವಚನಾನಂದ ಶ್ರೀಗಳು ಸಾನಿಧ್ಯ ವಹಿಸಲಿದ್ದಾರೆ ಎಂದರು.

ಸಮಾಜದ ತಾಲೂಕಿನ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸ್ವ ವಿವರಣೆ, ಅಂಕಪಟ್ಟಿ, ಆಧಾರ್ ಕಾರ್ಡ್ ಹಾಗೂ 3 ಪಾಸ್ ಪೋರ್ಟ್ ಸೈಜ್ ಪೋಟೋ ಗಳನ್ನು ಜೂನ್–30ನೇ ತಾರೀಖು ಒಳಗೆ ಬಿ.ಎಸ್.ಎನ್.ಎಲ್. ಕಚೇರಿ ಹತ್ತಿರದ ಪಂಚಮಸಾಲಿ ಬ್ಯಾಂಕ್ ನ ಕಾರ್ಯದರ್ಶಿ ಮುದುಕಪ್ಪ ಅವರ ಬಳಿ ಸಲ್ಲಿಸಲು ತಿಳಿಸಿದ್ದಾರೆ.

> ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ. ಕೈಯಲ್ಲೊಂದು ಕನ್ನಡ ಪತ್ರಿಕೆ ಇರಲಿ.
>
> ಡಿ..ವಿ.ಜಿ.

---

# ಪೊಲೀಸ್ ಆಯುಕ್ತ ಬಿ ದಯಾನಂದ್‌ರ ಅಮಾನತ್ತು ಆದೇಶ ಹಿಂಪಡೆಗೆ ಒತ್ತಾಯ

## ಸರ್ಕಾರ ನಿರ್ಲಕ್ಷ್ಯಿಸಿದರೆ ರಾಜ್ಯಾದ್ಯಂತ ಬೃಹತ್ ಹೋರಾಟ




■ **ಹಂಪಿ ಟೈಮ್ಸ್ ಕೂಡ್ಲಿಗಿ**

ವಾಲ್ಮೀಕಿ ಸಮುದಾಯದ ದಕ್ಷ, ಪ್ರಾಮಾಣಿಕ ಅಧಿಕಾರಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಅವರ ಅಮಾನತ್ತು ಆದೇಶವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿ ಅಖಿಲ ಭಾರತ ವಾಲ್ಮೀಕಿ ಮಹಾಸಭಾ ತಾಲೂಕು ಘಟಕದಿಂದ ಸೋಮವಾರ ತಹಸೀಲ್ದಾರ್ ವಿ. ಕೆ.ನೇತ್ರಾವತಿ ಮೂಲಕ ಮುಖ್ಯಮಂತ್ರಿ ಗೆ ಮನವಿ ಸಲ್ಲಿಸಿದರು.

ಸಮಾಜದ ತಾಲೂಕಧ್ಯಕ್ಷ ಸುರೇಶ್ ಮಾತನಾಡಿ, ಬೆಂಗಳೂರು ನಗರದಲ್ಲಿ ಆರ್ ಸಿಬಿ ಕ್ರಿಕೆಟ್ ವಿಜಯೋತ್ಸವದ ವೇಳೆ ಕಾಲ್ತುಳಿವಾಗಿ 11 ಜನ ಮೃತಪಟ್ಟ ಹಿನ್ನೆಲೆಯಲ್ಲಿ ಸರ್ಕಾರ ವಾಲ್ಮೀಕಿ ಸಮುದಾಯದ ದಕ್ಷ, ಪ್ರಾಮಾಣಿಕ ಅಧಿಕಾರಿ ಬಿ.ದಯಾ ನಂದ ಅವರು ಸೇರಿದಂತೆ ಇತರೆ ಅಧಿಕಾರಿಗಳನ್ನು ಅಮಾನತ್ತು ಮಾಡಿದ್ದನ್ನು ವಾಲ್ಮೀಕಿ ಸಮಾಜ ತೀವ್ರವಾಗಿ ಖಂಡಿಸುತ್ತದೆ. ಸರ್ಕಾರ ಎಚ್ಚೆತ್ತುಕೊಂಡು ಆದೇಶ ಹಿಂಪಡೆಯದಿದ್ದರೆ, ರಾಜ್ಯಾದ್ಯಂತ ವಾಲ್ಮೀಕಿ ಸಮುದಾಯದ ಅನೇಕ ಸಂಘಟನೆಗಳು ಬೀದಿಗಿಳಿದು ಬೃಹತ್ ಹೋರಾಟ ಮಾಡಬೇಕಾಗುತ್ತದೆ. ಆ ಸಂದರ್ಭದಲ್ಲೇನಾದರೂ ಅನಾಹುತಗಳಾದರೆ ಕಾಂಗ್ರೆಸ್ ಸರ್ಕಾರದ್ದೇ ಹೊಣೆಯಾಗುತ್ತದೆ ಎಂಧು ಎಚ್ಚರಿಸಿದರು.

ತಹಸೀಲ್ದಾರ್ ವಿ.ಕೆ.ನೇತ್ರಾವತಿ ಮನವಿ ಸ್ವೀಕರಿಸಿದರು. ಪಪಂ ಸದಸ್ಯ ಕೆ.ಈಶಪ್ಪ, ವಾಲ್ಮೀಕಿ ಹಿರಿಯ ಮುಖಂಡ ಸಿರಬಿ ಅಂಜಿನಪ್ಪ, ಡಿಎಸ್ಎಸ್ ಜಿಲ್ಲಾ ಸಂಚಾಲಕ ಎಸ್.ದುರುಗೇಶ್, ಸಿಪಿಐ ಜಿಲ್ಲಾ ಕಾರ್ಯದರ್ಶಿ ಎಚ್.ವೀರಣ್ಣ, ಢಾಣಿ ರಾಘವೇಂದ್ರ, ಉಗ್ರೇಶ್, ನೀರ್ಕಲ್ ಅಜೇಯ, ಸೊಲ್ಲೇಶ್, ಗುರಿಕಾರ ರಾಘವೇಂದ್ರ, ಸಕ್ರಪ್ಪ, ಕಾಶೀನಾಥ್, ಕೆ.ಕೆ.ಹಟ್ಟಿ ರಮೇಶ್, ಕುಪ್ಪಿನಕೆರೆ ಕರಿಬಸಪ್ಪ ಸೇರಿದಂತೆ ಅನೇಕರು ಇದ್ದರು.

---

## ರಾಜ್ಯಮಟ್ಟದ ಕವಿ ಸಮ್ಮೇಳನಕ್ಕೆ ಶಿಕ್ಷಕ ಶೇಖರಯ್ಯ ಆಯ್ಕೆ

■ **ಹಂಪಿ ಟೈಮ್ಸ್ ಕೂಡ್ಲಿಗಿ**



ನಾಗಮಂಗಲದ ಗೆಳತಿಗುಡ್ಡ ಪರಿಸರ ಕೂಟ, ಕನ್ನಡ ಸಂಘ ಚಾವಡಿ ಇವರ ಸಂಯುಕ್ತ ಆಶ್ರಯದಲ್ಲಿ ಮಂಡ್ಯ ಜಿಲ್ಲೆ ನಾಗಮಂಗಲದಲ್ಲಿ ಜೂ.22 ರಂದು ನಡೆಯುವ ರಾಜ್ಯಮಟ್ಟದ ಕವಿ ಸಮ್ಮೇಳನಕ್ಕೆ ಪಟ್ಟಣದ ಶಿಕ್ಷಕ ಕವಿ ಶೇಖರಯ್ಯ ಗೆದ್ದಲಗಟ್ಟೆ ಆಯ್ಕೆಯಾಗಿದ್ದಾರೆ.

ಕಾವ್ಯ ಕಮ್ಮಟಕ್ಕೆ ಸುಮಾರು 75 ಕವಿ/ಕವಯಿತ್ರಿಯರು ಕವಿತೆಗಳನ್ನು ಸ್ಪರ್ಧೆಗಾಗಿ ಕಳುಹಿಸಿದ್ದರು. ಇದರಲ್ಲಿ 30 ಕವಿಗಳನ್ನು ಆಯ್ಕೆಮಾಡಲಾಗಿದೆ. ಅದರಲ್ಲಿ ಶೇಖರಯ್ಯ ಇವರ ಅವ್ವನ ರೊಟ್ಟಿ... ಎಂಬ ಕವಿತೆ ಆಯ್ಕೆಯಾಗಿ, ಕವಿಗೋಷ್ಠಿಯಲ್ಲಿ ಕವನವನ್ನು ವಾಚಿಸಲಿದ್ದಾರೆ. ಕವಿ ಶೇಖರಯ್ಯ ಅವರಿಗೆ ತಾಲೂಕು ಕಸಾಪ ಅಧ್ಯಕ್ಷ ವೀರೇಶ ಅಂಗಡಿ, ಬಿಇಒ ಎಸ್.ಎಸ್. ಜಗದೀಶ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು, ಕವಿಗಳು, ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹರ್ಷ ವ್ಯಕ್ತಪಡಿಸಿದ್ದಾರೆ.

---


ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ ಕನ್ನಡ ದಿನ ಪತ್ರಿಕೆ

Searching for the perfect platform to promote your brand?
Want to reach more people?
Choose HAMPI TIMES

Scan to read epaper



HAMPI TIMES
Kannada Daily News paper
Print & Digital Edition
Contact : 94486 33038
E-mail: hampitimes@gmail.com
www.hampitimes.com


---

# ಸಜ್ಜಲಯ್ಯಗಳ ಬಸವರಾಜ ಅಗ್ನಿವೀರ್‌ಗೆ ಆಯ್ಕೆ

## ಸೂಲದಹಳ್ಳಿ ಸರ್ಕಾರಿ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿ

■ **ಹಂಪಿ ಟೈಮ್ಸ್ ಕೂಡ್ಲಿಗಿ**

ಕೂಡ್ಲಿಗಿ ತಾಲೂಕಿನ ಸೂಲದಹಳ್ಳಿ ಸರ್ಕಾರಿ ಪ್ರೌಢಶಾಲೆಯ ಹಳೆಯ ವಿದ್ಯಾರ್ಥಿ ಸಜ್ಜಲಯ್ಯಗಳ ಬಸವರಾಜ ಇವರು ಭಾರತೀಯ ಸೇನೆಯ 'ಅಗ್ನಿವೀರ್' ಯೋಜನೆಯಡಿ ಸೈನ್ಯಕ್ಕೆ ಆಯ್ಕೆಯಾಗಿದ್ದು, ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ಶಾಲೆಯ ಮುಖ್ಯೋಪಾದ್ಯಾಯ ಡಿ.ಬೋರಯ್ಯ ಸಂತಸ ವ್ಯಕ್ತಪಡಿಸಿದರು.

ಸೂಲದಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಶಾಲೆಯಲ್ಲಿ ಶಾಲಾ ಆಡಳಿತ ಮಂಡಳಿ, ಶಿಕ್ಷಕ ವೃಂದದಿಂದ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದ ಅಧ್ಯಕ್ಷತೆವಹಿಸಿ ಸೋಮವಾರ ಮಾತನಾಡಿದರು. ನಮ್ಮ ಶಾಲೆಯ ವಿದ್ಯಾರ್ಥಿಯೊಬ್ಬ ಭಾರತೀಯ ಸೇನೆಗೆ ಸೇರಿ ದೇಶ ಸೇವೆಗೆ ಹೊರಟಿರುವುದು ನಮಗೆಲ್ಲರಿಗೂ ಹೆಮ್ಮೆಯ ವಿಷಯ. ಸಜ್ಜಲಯ್ಯಗಳ ಬಸವರಾಜ ಅವರ



ಶ್ರಮ, ಶಿಸ್ತು ಮತ್ತು ದೇಶಪ್ರೇಮ ಇತರ ವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಲಿ ಎಂದು ಹಾರೈಸಿದರು.

ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು ಸೈನ್ಯಕ್ಕೆ ಆಯ್ಕೆಯಾದ ವೀರಯೋಧನಿಗೆ ಶಾಲು ಹೊದಿಸಿ ಗೌರವಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದರು ವೀರಯೋಧ ಬಸವರಾಜ, ಶಾಲೆಯಲ್ಲಿ ಕಲಿತ ಹಳೆಯ ದಿನಗಳನ್ನು ಮೆಲುಕು ಹಾಕಿ ಶಿಕ್ಷಕರು ಕಲಿಸಿದ ಶಿಸ್ತು, ಮತ್ತು ಬೋಧಿಸಿದ ಪಾಠಗಳು ನನ್ನ ಜೀವನಕ್ಕೆ ಬೆಳಕಾಗಿದೆ ಎಂದು ಎಲ್ಲಾ ಶಿಕ್ಷಕರನ್ನು ಸ್ಮರಿಸಿದರು.

ಶಿಕ್ಷಕರಾದ ಷಡಕ್ಷರಿಗೌಡ, ಹರೀಶ ಗೌಡ, ರವಿ.ಎನ್, ರೇವಣಾರಾಧ್ಯ ಜೆ.ಎಂ, ವಿಜಯಲಕ್ಷ್ಮಿ, ಎಂ.ಬಸವರಾಜ ಹೇಮಂತ, ಸಂತೋಷ್ ಹಾಸ್ಟೆಲ್ ಬಸವರಾಜ, ಗ್ರಾಮ ಪಂಚಾಯಿತಿ ಸದಸ್ಯರು, ಎಸ್.ಡಿ.ಎಂ.ಸಿ. ಸದಸ್ಯರು ಮತ್ತು ಗ್ರಾಮದ ಹಿರಿಯರು ಈ ಸನ್ಮಾನ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಮಂಜುನಾಥ ಅವರ ಈ ಸಾಧನೆಗೆ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದು, ಅವರ ಮುಂದಿನ ಸೇವಾ ಜೀವನಕ್ಕೆ ಶುಭ ಕೋರಿದರು. ಶಾಲೆಯ ಇತಿಹಾಸದಲ್ಲಿ ಒಂದು ಸ್ಮರಣೀಯ ಕ್ಷಣವಾಗಿ ಮತ್ತು ಶಾಲೆಯ ಇತರ ವಿದ್ಯಾರ್ಥಿಗಳಿಗೆ ಉತ್ತಮ ಪ್ರೇರಣೆಯಾಯಿತು.

ಶಿಕ್ಷಕ ಮಧು.ಕೆ. ನಿರೂಪಿಸಿದರು. ಖಲೀಲ್ ಸಾಹೇಬ್ ವಂದಿಸಿದರು. ವಿಶ್ವನಾಥ. ಕೆ. ಸ್ವಾಗತಿಸಿದರು.

## ನಿಗದಿಪಡಿಸಿದ ಸಮಯದಲ್ಲಿ ಅಂಜನಾದ್ರಿ ದೇವಸ್ಥಾನದ ಕೆಲಸಗಳು ಮುಗಿಯಬೇಕು : ಸಚಿವ ಎಚ್.ಕೆ. ಪಾಟೀಲ್



■ ಹಂಪಿ ಟೈಮ್ಸ್ ಕೊಪ್ಪಳ

ನಿಗದಿಪಡಿಸಿದ ಸಮಯದಲ್ಲಿ ಅಂಜನಾದ್ರಿ ದೇವಸ್ಥಾನದ ಕೆಲಸ ಹಾಗೂ ಕಾಮಗಾರಿಗಳು ಮುಗಿಯಬೇಕು. ಯಾವುದೇ ಕಾರಣಕ್ಕೆ ವಿಳಂಬವಾಗಬಾರದು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ. ಪಾಟೀಲ್ ಹೇಳಿದರು.

ಅವರು ಸೋಮವಾರ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಜಿಲ್ಲಾಡಳಿತ ಕೊಪ್ಪಳ ಇವರ ಸಹಯೋಗದಲ್ಲಿ ಅಂಜನಾದ್ರಿ ಬೆಟ್ಟದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂಜನಾದ್ರಿ ಮತ್ತು ಕೊಪ್ಪಳ ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕುರಿತು ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಂಜನಾದ್ರಿ ದೇವಸ್ಥಾನದ ವಸತಿ ಸಮುಚ್ಚಯದ ಕೆಲಸ ಈ ವರ್ಷದ ಡಿಸೆಂಬರ್ ತಿಂಗಳಲ್ಲಿ ಪೂರ್ಣಗೊಳಿಸಬೇಕು. ಶೌಚಾಲಯ ಮತ್ತು ಬಾತ್‌ರೂಂಗಳನ್ನು ಸೌದತ್ತಿ ಯಲ್ಲಮ್ಮನ ಗುಡ್ಡದಲ್ಲಿ ಬಹಳ ಒಳ್ಳೆಯ ರೀತಿಯಲ್ಲಿ ಮಾಡಿದ್ದಾರೆ. ಅದನ್ನು ಒಂದು ಸಲ ನೋಡಿಕೊಂಡು ಬಂದು ಅದೇ ತರಹ ಇಲ್ಲಿಯೂ ಮಾಡಿ. ಬ್ಯಾಗ್ ಇಡಲು ಕ್ಲಾಕ್ ರೂಮ್ ಸಹ ಮಾಡಿದ್ದಾರೆ. ಅಂಜನಾದ್ರಿ ಬೆಟ್ಟಕ್ಕೆ ರೋಪ್‌ವೇ, ಕೇಬಲ್ ಕಾರ್ ಮಾಡುವುದರಿಂದ ಇಲ್ಲಿಗೆ ಭೇಟಿ ನೀಡುವ ಜನರಿಗೆ ಅನುಕೂಲವಾಗಲಿದೆ. ಎಸ್ಕಲೇಟರ್ ಮಾಡುವ ಸಲುವಾಗಿ ಒಂದು ವಾರದ ಒಳಗಾಗಿ ಸಮೀಕ್ಷೆ ಎಷ್ಟಿಮೇಟ್ ಅನ್ನು ಮಾಡಲಾಗುತ್ತಿದೆ ಎಂದರು.

ಸುಮಾರು 15 ವರ್ಷಗಳಿಂದ ಅಂಜನಾದ್ರಿ ಅಭಿವೃದ್ಧಿ ಕುರಿತು ಚರ್ಚೆಗಳು ನಡೆಯುತ್ತಿದ್ದವು. ಈ ಭಾಗದ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಆಂಜನೇಯ ಸ್ವಾಮಿ ಭಕ್ತರು ಸನ್ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆದಿದ್ದರಿಂದ 2024– 25 ನೇ ಸಾಲಿನಲ್ಲಿ ನೂರು ಕೋಟಿ ರೂ. ಅನುದಾನ ನೀಡಿದ್ದು, ಇದರ ಕ್ರಿಯಾ ಯೋಜನೆ ತಯಾರಿಸಿ 600 ಕೊಠಡಿಗಳ ಪ್ರವಾಸಿ ಮಂದಿರ, ಸಮುದಾಯ ಭವನ, ನಿಲುಗಡೆ ಸ್ಥಳ, ಪ್ರದಕ್ಷಣಾ ಪಥ, ಸ್ನಾನ ಘಟ್ಟ, ವಿಐಪಿ ಅತಿಥಿ ಗೃಹ, ಸೇರಿದಂತೆ ಇತರೆ ಕೆಲಸಗಳ ಪ್ರಾಸ್ತಾವಿತ ಯೋಜನೆಗಳನ್ನು ರೂಪಿಸಲಾಗಿದೆ. ಇವುಗಳನ್ನು ನಿಗದಿಪಡಿಸಿದ ಸಮಯದಲ್ಲಿ ಮುಗಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಹೇಳಿದರು.

ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ಮಾತನಾಡಿ, ಹನುಮ ಮಾಲೆ ಕಾರ್ಯಕ್ರಮಕ್ಕೆ ಲಕ್ಷಾಂತರ ಜನರು ಅಂಜನಾದ್ರಿಗೆ ಬರುತ್ತಾರೆ. ಹಾಗಾಗಿ ಮಾರ್ಗ ಮಧ್ಯದ ಅಲ್ಲಲ್ಲಿ ಸ್ನಾನಗೃಹ ಹಾಗೂ ಶೌಚಾಲಯಗಳನ್ನು ನಿರ್ಮಿಸಬೇಕು. ವಿಶೇಷವಾಗಿ ಅಂಜನಾದ್ರಿಗೆ ಭಕ್ತರು ಡಿಸೆಂಬರ್ ಮತ್ತು ಹನುಮ ಜಯಂತಿ ಸಂದರ್ಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಾರೆ ಎಂದು ಹೇಳಿದರು.

ಸಭೆಗೂ ಮುಂಚೆ ಸಚಿವರು ಅಂಜನಾದ್ರಿ ದೇವಸ್ಥಾನದ ಪಾದಗಟ್ಟೆಯಲ್ಲಿ ಪೂಜೆ ಸಲ್ಲಿಸಿದರು. ಸಭೆಯ ನಂತರ ಕೊಪ್ಪಳ ಜಿಲ್ಲೆಯ ಪ್ರವಾಸಿ ತಾಣಗಳ ಕುರಿತ ಬ್ರ್ಯಾಂಡ್ ಕೊಪ್ಪಳ ವೆಬ್‌ಸೈಟ್ ಉದ್ಘಾಟಿಸಿದರು. ಈ ಸಭೆಯಲ್ಲಿ ಕೊಪ್ಪಳ ಸಂಸದರಾದ ರಾಜಶೇಖರ ಬಸವರಾಜ ಹಿಟ್ನಾಳ, ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಸಲ್ಮಾ ಫಾಯಿಮಾ, ಆಯುಕ್ತರಾದ ರಾಜೇಂದ್ರ ಕೆ.ವಿ., ರಾಜವಂಶಸ್ಥರಾದ ಲಲಿತಾ ರಾಣಿ, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ವಿವಿಧ ಇಲಾಖೆಯ ಅಧಿಕಾರಿಗಳಿದ್ದರು.

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

**ಸಂಪಾದಕರು: ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.** ಇ–ಮೇಲ್:hampitimes@gmail.com
M: 94486 33038

## ಓದುಗರ ಗಮನಕ್ಕೆ

**ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.**

**– ಜಾಹೀರಾತು ವ್ಯವಸ್ಥಾಪಕರು.**

# ಚಿಂತೆಯಿಂದ..... ಚಿಂತನೆಯೆಡೆಗೆ

**"ಚಿಂತೆ – ಚಿತೆ" ಯಿಂದ..... "ಚಿಂತನೆ" ಯಡೆಗೆ.......**

**ಚಿಂತೆಯೇ ನಮ್ಮ ತಾಯಿ ತಂದೆ...**
**ಚಿಂತೆಯೇ ನಮ್ಮ ಬಂಧು ಬಳಗ...**
**ಚಿಂತೆ ಇಲ್ಲದ ಮನುಜನಿದ್ದೋಡೆ**
**ಅವನೇ ನಿಜ ಪರಮಾತ್ಮನು....**

**ಚಿಂತೆ....ಚಿಂತೆ....ಚಿಂತೆ....**

"ಚಿಂತೆ ಮತ್ತು ಚಿತೆ" ಎಂತಹ ಅದ್ಭುತ ಪದಗಳು. ಒಂದಕ್ಕೊಂದು ಅವಿನಾಭಾವ ಸಂಬಂಧ ಚಿಂತೆ ಹಾಗೂ ಚಿತೆಗೆ ಕೇವಲ ಒಂದು ಸೊನ್ನೆ ಯಷ್ಟೇ ವ್ಯತ್ಯಾಸ, ಆದರೆ ಅವೆರಡು ಪದಗಳು ಅರ್ಥವೇ ಬೇರೆ... ಚಿತೆಯೆಂಬುದು ಮನುಷ್ಯ ಸತ್ತ ನಂತರ ಅವನ ದೇಹವನ್ನು ಸುಟ್ಟರೆ.. ಚಿಂತೆಯು ಮನುಷ್ಯನನ್ನು ಜೀವಂತವಾಗಿ ಸುಟ್ಟುಬಿಡುತ್ತದೆ ಅಲ್ಲವೇ.... ಮಗುವಾಗಿದ್ದಾಗ ತಿಳಿಯಾಗಿದ್ದ ಮನಸ್ಸು ಬೆಳೆಯುತ್ತಾ ಹೋದಂತೆ ಸಮಸ್ಯೆಗಳ ಗೂಡಾಗಿ ಪರಿಣಮಿಸುತ್ತದೆ. ಯಾವಾಗ ಮನುಷ್ಯ ಈ ಸಮಸ್ಯೆಗೆ ನನ್ನಿಂದ ಪರಿಹಾರ ಒದಗಿಸಲು ಸಾಧ್ಯವಿಲ್ಲ ಎಂದು ಭಾವಿಸುತ್ತಾನೆಯೋ... ಆಗ ಆ ಸಮಸ್ಯೆ ಚಿಂತೆಯ ರೂಪದಲ್ಲಿ ಅವನನ್ನ ಕಾಡಿಸಲು ಪ್ರಾರಂಭಿಸುತ್ತದೆ.ಆಗಿನಿಂದ ಈ ಚಿಂತೆ ಮನುಷ್ಯನನ್ನ ಆಳವಾಗಿ ಕಾಡಲು ಪ್ರಾರಂಭಿಸುತ್ತದೆ. ನಮ್ಮ ಜೀವನದಲ್ಲಿ ಎಲ್ಲಾ ವರ್ಗದ ಜನರು ತಮ್ಮ ಜೀವನದುದ್ದಕ್ಕೂ ಮಾಡುವ ಒಂದೇ ಒಂದು ಕೆಲಸ ಅಂದರೆ ಅದುವೇ ಚಿಂತೆ......
ಪ್ರಪಂಚದಲ್ಲಿರುವ ಪ್ರತಿ ವ್ಯಕ್ತಿಯು, ಊಟವನ್ನು ಬಿಡಬಹುದು. ನಿದ್ರೆಯನ್ನು ಬಿಡಬಹುದು. ಆಸ್ತಿ– ಅಂತಸ್ತು ಎಲ್ಲವನ್ನು ಬಿಡಬಹುದು ಆದರೆ ಈ ಚಿಂತೆಯನ್ನು ಬಿಡಲು ಸಾಧ್ಯವೇ ಇಲ್ಲಾ.... ಈ ಚಿಂತೆ ಮನುಷ್ಯನ ನೆರಳಿದ್ದಹಾಗೆ . ಮನುಷ್ಯ ಎಲ್ಲಿಯ ಹೋದರು ಏನೇ ಮಾಡುತ್ತಿದ್ದರು ಚಿಂತೆ ಅವನ ಜೊತೆಯೇ ಇದ್ದೆ ಇರುತ್ತದೆ...ಆಡು ಮುಟ್ಟದ ಸೊಪ್ಪಿಲ್ಲ ಹಾಗೆಯೇ ಚಿಂತೆ ಇಲ್ಲದ ಮನುಷ್ಯನಿಲ್ಲ ಎನ್ನುವ ರೀತಿ ವಾಸ್ತವವಾಗಿದೆ ಹಾಗಾದರೆ ಬನ್ನಿ ಸ್ನೇಹಿತರೆ ಚಿಂತೆ ಮತ್ತು ಚಿಂತನೆ ಇದರ ಬಗ್ಗೆ ಮುಂದೆ ತಿಳಿಯುತ್ತಾ ಹೋಗೋಣ....
ಚಿಂತೆ ಮತ್ತು ಚಿಂತನೆ ಮನುಷ್ಯನ ಸಹಜ ಪ್ರವೃತ್ತಿಗಳು ಮತ್ತು ಮಾನಸಿಕ ಪ್ರಕ್ರಿಯೆಗಳಾಗಿದ್ದು ಇವು ನಮ್ಮ ಜೀವನದಲ್ಲಿ ಸಾಮಾನ್ಯವಾಗಿವೆ. ಚಿಂತೆ ಎಂದರೆ ನಾವು ಯಾವುದೋ ಒಂದು ವಿಷಯದ ಬಗ್ಗೆ ಭಯಪಡುವ ಅಥವಾ ಆತಂಕ ಪಡುವ ಒಂದು ಭಾವನೆ. ಅಥವಾ ನಮ್ಮ ಹಿರಿಯರು ಹೇಳುವ ಹಾಗೆ ಚಿಂತೆ ಎಂದರೆ ಯೋಚನೆ.. ಕೊರಗು.. ಕಳವಳ.. ವ್ಯಾಕುಲ.. ಬೇಸರ.. ವ್ಯತೆ.. ಶೋಕ... ದುಃಖ.. ಇದು ಸಹ ಚಿಂತೆ ಎಂದು ಹೇಳಬಹುದು ಆದರೆ... ಚಿಂತನೆಯು ಆಲೋಚನೆಗಳನ್ನು ಮತ್ತು ಸಮಸ್ಯೆಗಳನ್ನು ಪರಿಹರಿಸುವ ಒಂದು ಪ್ರಕ್ರಿಯೆಯಾಗಿದೆ. ಇದು ಮಾಹಿತಿ ಯನ್ನು ಅರ್ಥ ಮಾಡಿ ಕೊಳ್ಳಲು ಸಮಸ್ಯೆಯನ್ನು ಪರಿಹರಿಸಲು ಮತ್ತು ನಿರ್ಧಾರಗಳನ್ನು ತೆಗೆದುಕೊಳ್ಳಲು ಬಳಸುವ ಪದವೇ ಚಿಂತನೆ ಚಿಂತನೆಯು ನಮ್ಮ ಜೀವನದ ಮೇಲೆ ದೊಡ್ಡ ಪ್ರಭಾವವನ್ನು ಬೀರುತ್ತದೆ. ನಮ್ಮ ವಚನಕಾರರಾದ ಅಂಬಿಗರ ಚೌಡಯ್ಯನವರು ಹೇಳುವ ಹಾಗೆ ಬಡತನಕ್ಕೆ ಉಂಬುವ ಚಿಂತೆ..ಉಂಡರೆ ಉಡುವ ಚಿಂತೆ..ಉಡಲಾರದೆ ಇಡುವ ಚಿಂತೆ.. ಇಡಲಾರದೆ ಹೆಂಡಿರ ಚಿಂತೆ.. ಹೆಂಡಾದರೆ ಮಕ್ಕಳ ಚಿಂತೆ. ಮಕ್ಕಳಾದರೆ ಬದುಕುವ ಚಿಂತೆ. ಬದುಕಾದರೆ ಕೇಡಿನ ಚಿಂತೆ.. ಕೇಡಾದರೆ ಮರಣದ ಚಿಂತೆ.. ಈ ಚಿಂತೆ ಎನ್ನುವುದು ಮನುಷ್ಯನ ಜೀವನದ ಪ್ರತಿ ಹಂತದಲ್ಲಿಯೂ ಸಹ ಮನುಷ್ಯನ ಜೊತೆ ಇದ್ದೇ ಇರುತ್ತದೆ. ನಮ್ಮ ಜೀವನದ ಸಾರಾಂಶವನ್ನು ಅಂಬಿಗರ ಚೌಡಯ್ಯನವರು ಅದ್ಭುತವಾಗಿ ತಮ್ಮ ವಚನದ ಮುಖಾಂತರ ಪ್ರಪಂಚಕ್ಕೆ ತಿಳಿಸಿಕೊಟ್ಟಿದ್ದಾರೆ... ಅಲ್ಲವೇ



ಡಾ.ಪ್ರಸನ್ನ ನಾಡಿಗರ್
M; 9900550684
Scan For Digital Colourful
HAMPI TIMES E-paper

**"ಚಿಂತಾಯಶ್ಚ ಚಿತಾಯಶ್ಚ**
**ಬಿಂದುರೆಕೋ ವಿಶಿಷ್ಟತೆ**
**ಚಿತಾ ದಹಿತೆ ನಿರ್ಜೀವಂ**
**ಚಿಂತಾ ಯ ಸಜೀವಂ.."**

ಇದರ ಅರ್ಥ ಚಿತೆ ಸತ್ತವರನ್ನು ಧಯಿಸಿದರೆ.., ಚಿಂತೆ ಬದುಕಿದ್ದವರನ್ನ ದಯಿಸುತ್ತದೆ.. ನಾವು ಚಿಂತೆಯಿಂದ ಪ್ರತಿದಿನ ಪ್ರತಿ ಕ್ಷಣ ಸಾಯುತ್ತಲೇ ಇರುತ್ತೇವೆ. ನಾನು ಮೇಲೆ ಹೇಳಿರುವ ಹಾಗೆ

**ಚಿಂತೆ ಇಲ್ಲದ ಮನುಜ ನಿದ್ದೋಡೆ..**
**ಅವನೇ ನಿಜ ಪರಮಾತ್ಮನು**

ಹಾಗಾದರೆ ಪರಮಾತ್ಮನಿಗೆ ಚಿಂತೆ ಇಲ್ಲವೇ.....? ಎಂಬ ಪ್ರಶ್ನೆ ಮೂಡಬಹುದು. ಎಷ್ಟೊಂದು ಸೂರ್ಯ ಮಂಡಲ... ಎಷ್ಟೊಂದು ನಕ್ಷತ್ರಗಳು.. ಎಷ್ಟೊಂದು ಬಗೆಯ ಜೀವಿಗಳು.. ಎಷ್ಟೊಂದು ಬಗೆಯ ಪ್ರಕೃತಿ.. ಇವೆಲ್ಲವುದರ ಸೃಷ್ಟಿ, ಸ್ಥಿತಿ, ಲಯಗಳಿಗೆ ಕಾರಣನಾದ ಪರಮಾತ್ಮನಿಗೆ ಚಿಂತೆ ಇಲ್ಲವೆಂದು ನೀವು ಕೇಳಬಹುದು. ನಿಜ ಅವನಿಗೆ ಚಿಂತೆಯೇ ಇಲ್ಲ.. ಏಕೆಂದರೆ ಅವನ ಕೆಲಸ ಅವನು ಮಾಡಿ ಮುಗಿಸಿದ್ದಾನೆ. ಸೃಷ್ಟಿ ಸ್ಥಿತಿ ಲಯಗಳನ್ನ ಸಹಜವಾಗಿ ನಿರಂತರವಾಗಿ ನಡೆದುಕೊಂಡು ಹೋಗುವಂತೆ ಮಾಡಿಬಿಟ್ಟಾಗಿದೆ. ಮನುಷ್ಯನಿಗೆ ಮಾಡಿದ್ದುಣ್ಣೋ ಮಾರಾಯ ಎಂಬ ಕರ್ಮಕ್ಕೆ ತಕ್ಕ ಫಲ ಎಂದು ಹೇಳಿಬಿಟ್ಟಿದ್ದಾನೆ. ಹಾಗಾಗಿ ದೇವರು ನಿಶ್ಚಿಂತೆಯಾಗಿ ಯಾರು ಯಾರ ತಲೆ ತೆಗೆದರೂ ಸುಮ್ಮನಿರುತ್ತಾನೆ ಹೊರತು ತಲೆ ಕೆಡಿಸಿಕೊಳ್ಳುವುದೇ ಇಲ್ಲ.
ಮನುಷ್ಯ ಚಿಂತೆಯಲ್ಲಿ ಮುಳುಗಿದಾಗ ಅವನ ದೇಹದಲ್ಲಿ ಹಾನಿಕಾರಕ ಹಾರ್ಮೋನುಗಳು ಶೇಖರಣೆಯಾಗುತ್ತದೆ. ಆದರೆ ನಾವು ಚಿಂತೆ ಮಾಡದಿದ್ದಾಗ ನಮ್ಮ ದೇಹದಲ್ಲಿ ಮನೊಲ್ಲಾಸಗೊಳಿಸುವಂತಹ ಹಾರ್ಮೋನುಗಳು ಶೇಖರಣೆಯಾಗಿ ನಮ್ಮ ಮನೋವ್ಯಥೆಗಳನ್ನು ಹೋಗಲಾಡಿಸುತ್ತವೆ. ಭೂಮಿಯ ಮೇಲಿರುವ ಯಾವ ವ್ಯಕ್ತಿಯು ಪರಿಪೂರ್ಣನಲ್ಲ ಪ್ರತಿಯೊಬ್ಬರಿಗೂ ತಮ್ಮದೇ ಆದ ಸಮಸ್ಯೆಗಳಿರುತ್ತವೆ, ಅದರಂತೆ ಪ್ರತಿಯೊಬ್ಬರಿಗೂ ಅವರದ್ದೇ ಆದ ವಿಶಿಷ್ಟವಾದ ಶಕ್ತಿ ಪ್ರತಿಭೆಗಳಿರುತ್ತವೆ ಆದರೆ ಸಮಸ್ಯೆಗಳ ಬಗ್ಗೆ ಚಿಂತಿಸದೆ ಪ್ರತಿಭೆಯನ್ನು ಸದುಪಯೋಗಪಡಿಸಿಕೊಳ್ಳುವ ಬಗ್ಗೆ ಚಿಂತನೆಯನ್ನು ನಡೆಸುವುದು ಒಳ್ಳೆಯದು. ಆದ್ದರಿಂದ ಚಿಂತೆಗಿಂತ ಚಿಂತನೆ ಮುಖ್ಯ ಎಂಬುದನ್ನ ಅರಿತರೆ ಮನುಷ್ಯನ ಬದುಕು ಉತ್ತಮವಾಗಿರುತ್ತದೆ.

**ಚಿಂತೆ ಮಾಡದ ಹಾಗೆ ಏನು ಮಾಡಬಹುದು......?**

1. ನಿಮಗೆ ನಿಯಂತ್ರಿಸಲಾಗದವನ್ನು ಬಿಟ್ಟು ಬಿಡಲು ಕಲಿಯಿರಿ
2. ಚಿಂತೆ ನಮಗೆ ಒಳ್ಳೆಯದಲ್ಲ ಎಂದು ಒಪ್ಪಿಕೊಳ್ಳಿ
3. ಸಂತೋಷವಾಗಿರಲು ಒಳ್ಳೆಯದನ್ನ ನೋಡಿ
4. ಕೃತಜ್ಞತೆಯನ್ನು ಅಭ್ಯಾಸ ಮಾಡಿಕೊಳ್ಳಿ
5. ಧ್ಯಾನ ಯೋಗ ಪ್ರಾಣಾಯಾಮ ಮತ್ತು ಸ್ವ ಆರೈಕೆಗಾಗಿ ಸಮಯವನ್ನು ಮೀಸಲಿಡಿ



6. ಸನ್ನಿವೇಶಗಳನ್ನು ಅತಿಯಾಗಿ ವಿಶ್ಲೇಷಿಸುವುದನ್ನು ತಪ್ಪಿಸಿ
7. ಇತರರು ಏನು ಯೋಚಿಸುತ್ತಾರೆ ಎಂಬುದರ ಬಗ್ಗೆ ಚಿಂತಿಸಬೇಡಿ
8. ತಾಳ್ಮೆ ಶಾಂತಿ ಸಹನೆಯಿಂದ ಇರಿ
9. ಎಲ್ಲವೂ ಸರಿಯಾಗುತ್ತದೆ ಎಂಬ ದೃಢ ನಂಬಿಕೆ ಇರಲಿ
10. ವರ್ತಮಾನದಲ್ಲಿ ಬದುಕಲು ಕಲಿಯಿರಿ
11. ನಿಮ್ಮ ಆಲೋಚನೆಯ ಬಗ್ಗೆ ಎಚ್ಚರವಿರಲಿ
12. ಚಿಂತನೆಯ ಮೂಲವನ್ನು ಗುರುತಿಸಿ
13. ಪೂರ್ಣಗೊಂಡ ಕೆಲಸಗಳ ಬಗ್ಗೆ ಯೋಚಿಸಬೇಡಿ
14. ಇಂದಿನದು ಮಾತ್ರ ಸತ್ಯ ಎನ್ನುವ ಮನಸ್ಥಿತಿ ಮೈಗೂಡಿಸಿಕೊಂಡಾಗ ಮಾತ್ರ ಚಿಂತೆ ಮುಕ್ತರಾಗಿರಲು ಸಾಧ್ಯ

ಚಿಂತೆ ಬಿಡಿ....ಚಿಂತನೆ ಮಾಡಿ... ಚಿಂತೆ ಹಿಮ್ಮುಖ, ರನ್ನಾಗಿಸಿದರೆ ಚಿಂತನೆ ಮುಮ್ಮುಕರನ್ನಾಗಿಸುತ್ತದೆ. ಚಿಂತೆಯು ನಾಳಿನ ತೊಂದರೆಗಳನ್ನು ತೆಗೆದುಕೊಳ್ಳುವುದಿಲ್ಲ. ಆದರೆ ಇಂದಿನ ಶಾಂತಿಯನ್ನು ಕಸಿದು ಕೊಳ್ಳುತ್ತದೆ. ಉತ್ತಮ ಚಿಂತನೆಯಿಂದ ಸರ್ವವೂ ಗೆಲ್ಲಬಹುದು ಚಿಂತೆಯಿಂದ ಸರ್ವೋ ಕಳೆದುಕೊಳ್ಳಬಹುದು ಆದ್ದರಿಂದ ಚಿಂತೆ ಬಿಟ್ಟು....ಚಿಂತನೆ ಕಡೆ ಗಮನ ಹರಿಸಿ.

# ತಪ್ಪು ಮಾಡದವರಾರವ್ರೇ...

'ನಿನಗೆ ಎಷ್ಟು ಹೇಳಿದರೂ ಅಷ್ಟೇನೇ ಒಂಚೂರು ಬುದ್ಧಿ ಬರಲಿಲ್ಲ. ಅವನನ್ನು ನೋಡು, ಮನೆಯಲ್ಲಿ ಹೇಳಿ ಕೊಡೋರು ಯಾರೂ ಇಲ್ಲ. ಆದ್ರೂ ನಿನಗಿಂತ ಒಳ್ಳೆಯ ಮಾರ್ಕ್ಸ ತೆಗೆದಿದ್ದಾನೆ. ನೀನೂ ಇದ್ದಿಯಾ' ಹೀಗೆ ಅಪ್ಪನೋ ಅಮ್ಮನೋ ತಮ್ಮ ಮಗನನ್ನು ಸ್ನೇಹಿತರ ಎದುರಿನಲ್ಲಿ ಹೋಲಿಸಿ ಬಯ್ಯುವುದು ಅನೇಕ ಕಡೆ ಕಂಡಿದ್ದೇವೆ. ಸಿಟ್ಟಿನ ಆವೇಶ, ಮಾತಿನ ಭರ, ಎಷ್ಟು ಹೇಳಿದರೂ ತಿಳಿದುಕೊಳ್ಳದ ಮಕ್ಕಳ ಎದುರಿನಲ್ಲಿ ಇಂತಹ ಮಾತುಗಳು ಬರುವುದು ಸಹಜವೇ ಆದರೂ ಮ್ಕಕಳನ್ನು ಇತರರ ಜೊತೆ ಹೋಲಿಸಿ ಮಾತನಾಡುವದಿದೆ ಯಲ್ಲ ಅದು ಮಾತ್ರ ಡೇಂಜರ್! ಸ್ನೇಹಿತರು ಒಂದೆಡೆ ಇರಲಿ, ಅವನ ಒಡಹುಟ್ಟಿದ ಅಣ್ಣ ತಮ್ಮ ಇದ್ದರೆ ಅವರೊಳಗೇ ಹೋಲಿಕೆ ಮಾಡಿ ಬಯ್ಯುವುದು ಕೂಡಾ ತಪ್ಪು.

ತಮ್ಮನ್ನು ಬೇರೆಯವರಿಗೆ ಹೋಲಿಸಿದರೆ ದೊಡ್ಡವರಿಗೆ ಎಷ್ಟು ಸಿಟ್ಟು ಬರುತ್ತದೆಯೋ ಮಕ್ಕಳಿಗೂ ಅಷ್ಟೇ ಇರಿಟೇಷನ್ ಆಗುತ್ತದೆ. ಅವರು ಕೇಳಿಸಿಕೊಳ್ಳುತ್ತಿರುವಾಗ ಅಥವಾ ಅವರಿಗೆ ತಿಳಿಯುವ ಹಾಗೆ ಸಣ್ಣವನು ಹೇಳಿದ ಮಾತು ಕೇಳ್ತಾನೆ. ದೊಡ್ಡವನೇ ಕತ್ತೆಯಾಗಿರೋದು ಎಂದು ಮಕ್ಕಳನ್ನು ಬಂಧುಗಳ ಅಥವಾ ಪರಿಚಿತರ ಮುಂದೆ ಹೋಲಿಸಿ ಮಾತಾಡಿದರೆ ಮಕ್ಕಳಲ್ಲಿ ಒತ್ತಡವನ್ನು, ದ್ವೇಷವನ್ನು ಇಲ್ಲವೇ ಕೀಳರಿಮೆಯನ್ನು ಹುಟ್ಟು ಹಾಕುತ್ತದೆ.



ಭೋಜರಾಜ ಸೊಪ್ಪಿಮಠ
ಕೊಪ್ಪಳ
Scan For Digital Colourful
HAMPI TIMES E-paper

ಮಕ್ಕಳನ್ನು ಬೆಳೆಸುವಾಗ ಪೋಷಕರಾದ ನಮಗೆ ಕೆಲವೊಂದು ಬೌಂಡರಿ ಲೈನ್ ಇರಬೇಕಾಗುತ್ತದೆ. ಆ ಸರ್ಕಲ್‌ನಲ್ಲಿದ್ದರೇನೇ ಎಲ್ಲರಿಗೂ ಒಳ್ಳೆಯದು. ಮಕ್ಕಳು ಸೂಕ್ಷ್ಮವಾಗಿ ನಮ್ಮನ್ನು ಗಮನಿಸುವದರಿಂದ ನಾವು ತೆಗೆದುಕೊಳ್ಳುವ ನಿರ್ಧಾರ ಹಾಗೂ ಮಾತುಗಳಿಂದ ಅವರ ಮೇಲೆ ನೇರ ಪರಿಣಾಮ ಬೀರುತ್ತದೆ. ಅದಕ್ಕಾಗಿ ಸ್ವಲ್ಪ ಎಚ್ಚರಿಕೆಯನ್ನು ವಹಿಸುವ ದರಿಂದ ಮನೆಯಲ್ಲಿ ಸ್ನೇಹಪೂರ್ಣ ವಾತಾವರ ಣವನ್ನು ಸೃಷ್ಟಿಸಬಹುದು. ಅದಕ್ಕಾಗಿ ಕೆಲ ದಾರಿಗಳು ಇಲ್ಲಿವೆ.

ನೀವು ತೆಗೆದುಕೊಳ್ಳುವ ನಿರ್ಧಾರಗಳನ್ನು ಎಲ್ಲರೂ ಪಾಲಿಸುವಂತೆ ಮಾಡಿ. ಸಂದರ್ಭಕ್ಕೆ ಅರ್ಹ ತೀರ್ಮಾನಗಳು ಆರೋಗ್ಯಕರವಾಗಿದ್ದರೆ ಅವರು ಒಬ್ಬರಿಗೊಬ್ಬರು ಜಗಳವಾಡುವದಿಲ್ಲ. ನಿಮ್ಮ ಮಾತು ನಿಮಗೆ ಸರಿ ಅನ್ನಿಸಿದ್ದರೆ ನಿರ್ದಾಕ್ಷಿಣ್ಯವಾಗಿ ಹೇಳಿ ಬಿಡಿ.

ಇಬ್ಬರು ಮಕ್ಕಳು ಜಗಳವಾಡುತಿದ್ದಾಗ ಯಾರೋ ಒಬ್ಬರನ್ನು ವಹಿಸಿಕೊಂಡು ಇನ್ನೊಬ್ಬರನ್ನು ಗದರಿಸುವಂತಹ ಸಂದರ್ಭ ಬರಬಹುದು. ಆಗ ತಪ್ಪು ಮಾಡಿದವರನ್ನು ನೇರವಾಗಿಯೇ ಬಯ್ಯಬೇಡಿ. ಏಕೆಂದರೆ ಅವನ ಅಹಂಗೆ ಪೆಟ್ಟು ಬೀಳಬಹುದು. ದೊಡ್ಡವನಾಗಿ ನಿನಗೆ ತಿಳಿಯೋದಿಲ್ಲಾ? ಅನ್ನುವದಾಗಲಿ, ಎಷ್ಟಾದರೂ ಅವನು ಚಿಕ್ಕವನು ಎಂದಾಗಲಿ ಹೇಳುವದನ್ನು ಕಡಿಮೆ ಮಾಡಿ. ಎಲ್ಲರಿಗೂ ಅವರವರದೇ ಆದ ಒಂದು ಪ್ರತಿಷ್ಠೆ ಇರುತ್ತದೆ.

ನೀವು ಅನುಕೂಲಸ್ಥರು ಆಗಿದ್ದರೆ ಮಕ್ಕಳೆಲ್ಲರಿಗೂ ಪ್ರತ್ಯೇಕವಾಗಿ ಓದಲು ಅನುಕೂಲವಾಗುವ ಪರಿಸ್ಥಿತಿ ನಿರ್ಮಿಸಿ. ಆ ರೀತಿ ಪ್ರತ್ಯೇಕವಾಗಿ ಅಭ್ಯಾಸ ಮಾಡುವದರಿಂದ ಸ್ವತಂತ್ರ ಅಭಿಪ್ರಾಯಗಳು ಬೆಳೆಯಲು ಸಹಾಯವಾಗುತ್ತದೆ.

ಮಕ್ಕಳ ಜಗಳ ಎಂತಹ ಪರಿಸ್ಥಿತಿಯಲ್ಲಿ ಪ್ರಾರಂಭವಾಗುತ್ತದೆ, ಅದಕ್ಕೆ ಕಾರಣಗಳೇನು? ಮೊದಲಾದ ವಿಷಯಗಳನ್ನು ಖಾತರಿ ಪಡಿಸಿಕೊಂಡು ಅಂತಹ ಸಂದರ್ಭಗಳು ಮತ್ತೇ ಬಾರದಂತೆ ಜಾಗ್ರತೆ ವಹಿಸಿ. ಮಕ್ಕಳು ಕೈ ಕೈ ಹಿಡಿದು ಹೊಡೆದಾಟಕ್ಕೆ ಇಳಿದರೆ ಮಾತ್ರ ಮಧ್ಯ ಪ್ರವೇಶಿಸಿ. ಇಲ್ಲದಿದ್ದರೆ ಪದೇ ಪದೇ ಸಣ್ಣ ವಿಷಯಕ್ಕೂ ಗದರುತಿದ್ದರೆ ಅದಕ್ಕೆ ಅರ್ಥವಿರುವದಿಲ್ಲ. ಅವರ ಮನಸು ಶಾಂತವಾದಾಗ ತಿಳಿ ಹೇಳಿ.

ಮನೆಯಲ್ಲಿ ಇಬ್ಬರು ಮೂವರು ಮಕ್ಕಳಿದ್ದರೆ ಬರೀ ಒಬ್ಬರಿಗೆ ಆದ್ಯತೆ ಕೊಡಬೇಡಿ. ಸಂಬಂಧಿಗಳ ಮನೆಗೆ, ಮದುವೆಗೆ ಹೋಗುವುದು, ಶಾಪಿಂಗ್, ವಾಕಿಂಗ್, ಚಲನಚಿತ್ರ ಮುಂತಾದ ಕಡೆ ಹೋಗಬೇಕಾಗಿ ಬಂದಲ್ಲಿ ಒಂದೊಂದು ಬಾರಿ ಒಬ್ಬೊಬ್ಬರನ್ನು ಕರೆದುಕೊಂಡು ಹೋಗಿ. ಎಲ್ಲರಿಗೂ ಆದ್ಯತೆ ನೀಡುತ್ತಾರೆ ಎಂಬ ಭಾವನೆ ಆ ಮಕ್ಕಳಲ್ಲಿ ಬರಬೇಕು. ಎಲ್ಲರ ಜೊತೆಯೂ ಬೇರೆ ಬೇರೆಯಾಗಿ ಸ್ವಲ್ಪ ಸಮಯ ಕಳೆಯಿರಿ. ಇದು ಮುಖ್ಯ. ಐದು ನಿಮಿಷಗಳ ವಯಕ್ತಿಕ ಏಕಾಂತ ಸಂಭಾಷಣೆ ಮಕ್ಕಳ ಮೇಲೆ ಒಳ್ಳೆಯ ಪ್ರಭಾವ ಬೀರುತ್ತದೆ.

ಸಾಧ್ಯವಾದರೆ ಮಕ್ಕಳಲ್ಲಿ ಹುಟ್ಟುವ ಜಗಳವನ್ನು ಅವರೇ ಬಗೆಹರಿಸಿಕೊಳ್ಳಲು ಬಿಡಿ. ನೀವೇನೇ ಮಾಡಿ, ಆದರೆ ವಸ್ತುಗಳನ್ನು ಒಗೆಯುವುದು, ಒಡೆಯುವುದು, ಹಾಳು ಮಾಡುವುದು ಮಾಡಿದ್ದೇ ಆದಲ್ಲಿ ನೆಟ್ಟಗಿರಲ್ಲ ಎಂದೊಮ್ಮೆ ಖಡಕ್ಕಾಗಿ ವಾರ್ನಿಂಗ್ ಕೊಡಿ. ಕೆಟ್ಟ ಕೆಟ್ಟ ಬೈಗುಳಗಳನ್ನು ಮಾತ್ರ ಸಹಿಸಲೇಬೇಡಿ.

ಒಬ್ಬರ ವಸ್ತುಗಳನ್ನು ಇನ್ನೊಬ್ಬರು ಕೇಳಿ ಪಡೆಯುವಂತೆ ಪ್ರೋತ್ಸಾಹಿಸಿ. ಇದು ಪ್ರಾಮಾಣಿಕತೆಯನ್ನು ಹೆಚ್ಚಿಸುತ್ತದೆ. ಕದಿಯುವುದು, ಮುಚ್ಚಿಡುವುದು, ಬೇಕೆಂದೇ ಹಾಳು ಮಾಡುವುದು ಆಗದಂತೆ ಎಚ್ಚರ ವಹಿಸಿ. ಇಂತಹ ನಿರ್ಣಯಗಳಿಂದ ಕೇವಲ ಹತ್ತಿರದವರನ್ನು ಮಾತ್ರವಲ್ಲ ಬೇರೆಯವರ ಅನುಮತಿ ಇಲ್ಲದೇ



ಅವರ ವಸ್ತುಗಳನ್ನು ಬಳಸಬಾರದು ಎಂಬ ಅರಿವು ಮಕ್ಕಳಲ್ಲಿ ಸಣ್ಣ ವಯಸ್ಸಿನಲ್ಲಿಯೇ ಬೇರೂರುತ್ತದೆ. ಮನೆಗೊಂದೇ ಫೋನ್ ಇದ್ದರೆ ಸಂಬಂಧಿಸಿದವರೇ ಸ್ವೀಕರಿಸುವಂತಾಗಲಿ. ದುರಭ್ಯಾಸಗಳನ್ನು ಚಿಕ್ಕಂದಿನಿಂದಲೇ ಕಡಿಮೆ ಮಾಡಿ. ನಮ್ಮ ಮಕ್ಕಳ ವರ್ತನೆಯಲ್ಲಿ ನಮ್ಮ ಸಂಸ್ಕೃತಿ ಅಡಗಿರುತ್ತದೆ. ಉತ್ತಮ ನಾಗರಿಕರನ್ನಾಗಿ ಮಾಡುವಲ್ಲಿ ಹಿರಿಯರ ಪಾತ್ರವೇ ಪ್ರಮುಖವಾಗಿರುತ್ತದೆ.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055

- Admissions
- Requirements
- Firm Branding
- Public Notice
- Change of Name

"Thousands of eyes, one newspaper. 'Hampi Times' delivers your message directly to Hampi Times engaged readers."

HAMPI TIMES Kannada Daily
Print & Digital News Paper
BOOK NOW! Scan to Read

- Obituary
- Remembrance
- Birthday wish ads
- Events Display &
- Classified ads

# HAMPI TIMES, Bamboo Bazaar, Nr Valmiki Circle, Hosapete-583201, Vijayanagara Dist. 9482599089 / 9448633038


ಕವಿ ಮನಸು

## ಜಗವ ಬೆಳಗೋಣ

ಕತ್ತಲೆಯೊಳಗಿನ ಮನಸ್ಸು
ಬೆಳಕಿಗೆ ಹಾತೊರೆಯುತ್ತಿದೆ
ಬೆಳಕೋ! ಆದು ಮಿಂಚಂತೆ
ಬಂದು ಮಾಯವಾಗುತ್ತಿದೆ.

ಬೆಳಕೇ, ನಿನಗೆಷ್ಟು ಸೊಕ್ಕು
ಒಂದಿನಿತು ನನ್ನೊಡನೆ
ಇರಬಾರದೆ
ಕತ್ತಲಾಗಿರುವ ನನ್ನ ಬಾಳಿಗೆ
ಬೆಳಕಾಗಬಾರದೆ?

ಬೆಳಕೇ, ನಿನಗಿಷ್ಟು ಧಿಮಾಕು
ಒಳ್ಳೆಯದಲ್ಲ ಬಿಡು,
ಕತ್ತಲೆ ಇರುವುದಕ್ಕೆ
ನಿನಗಿಷ್ಟು ಬೆಲೆ
ತಿಳಿಯಿತೆ?

ಬೆಳಕೇ, ನೀನು ಪಕ್ಕಾ ಪಕ್ಷಪಾತಿ
ಎಲ್ಲರಿಗೂ ಸಮನಾಗಿಲ್ಲ
ಸಮನಾಗದಿದ್ದರೂ ಚಿಂತೆಯಿಲ್ಲ
ಒಂದಿಷ್ಟಾದರೂ ಬಂದುಬಿಡು.

ಬೆಳಕೇ, ನಿನ್ನ ಒಲವ ಬಯಸಿ
ಬಂದರೆ ಮಾಯವಾಗುತ್ತೀಯಾ
ಇಲ್ಲವೆ ಒಲವ ಸುಡುವಷ್ಟು
ಬೆಂಕಿಯಾಗುತ್ತೀಯಾ.

ಬೆಳಕೇ, ಅತಿಯಾಯ್ತು ನಿಂದು
ಕರೆಯುತಿರುವೆ ಕೊನೆಯದಾಗಿ
ಬಂದು ಬಿಡು, ಇಬ್ಬರೂ ಸೇರಿ
ಜಗವ ಬೆಳಗೋಣ.

– ರಮೇಶ ಶಂ ಮಂಟೂರ
ಮುಳವಾಡ, ಜಿ. ವಿಜಯಪುರ.

## ಹೈನುರಾಸು ಘಟಕ ಮತ್ತು ಮೇವು ಕತ್ತರಿಸುವ ಯಂತ್ರಕ್ಕೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

2025-26 ನೇ ಸಾಲಿನ (CEPMIZ) ಗಣಿ ಭಾದಿತ, ಪ್ರಭಾವಕ್ಕೊಳಗಾದ ಗ್ರಾಮಗಳಲ್ಲಿ ಫಲಾನುಭವಿಗಳಿಗೆ ಹೈನುರಾಸು (1+1) ಘಟಕ ಮತ್ತು 2 ಹೆಚ್‌ಪಿ ಸಾಮರ್ಥ್ಯವುಳ್ಳ ಮೇವು ಕತ್ತರಿಸುವ ಯಂತ್ರ ಕಾರ್ಯಕ್ರಮದಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಹೊಸಪೇಟೆ ತಾಲೂಕು ವ್ಯಾಪ್ತಿಯಲ್ಲಿ ಹೈನುಗಾರಿಕೆ ಘಟಕ ನಿರ್ಮಾಣ ಮತ್ತು 2 ಹೆಚ್‌ಪಿ ಸಾಮರ್ಥ್ಯವುಳ್ಳ ಮೇವು ಕತ್ತರಿಸುವ ಯಂತ್ರಕ್ಕೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಜೂ.25 ರೊಳಗೆ ಅರ್ಜಿಗಳನ್ನು ಪಡೆಯಬಹುದಾಗಿದೆ. ಘಟಕದ ಮೊತ್ತ 1.20 ಲಕ್ಷ ರೂ ವೆಚ್ಚದಲ್ಲಿ, ಎರಡು ಮಿಶ್ರತಳಿ ಹಸು, ಸುಧಾರಿತ ಎಮ್ಮೆ ಘಟಕ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವರ್ಗದವರಿಗೆ ಶೇ.90 ರಷ್ಟು ಸಹಾಯ ಧನದೊಂದಿಗೆ ಹಾಗೂ ಸಾಮಾನ್ಯ ವರ್ಗದವರಿಗೆ ಶೇ.60 ರಷ್ಟು ಸಹಾಯಧನ ಉಳಿದ ಮೊತ್ತ ಫಲಾನುಭವಿಯ ವಂತಿಕೆ ಅಥವಾ ಬ್ಯಾಂಕ್ ಸಾಲ ಹಾಗೂ ಉಚಿತ 2 ಹೆಚ್‌ಪಿ ಸಾಮರ್ಥ್ಯದ ಮೇವು ಕತ್ತರಿಸುವ ಯಂತ್ರವನ್ನು ಪಡೆಯಬಹುದಾಗಿದೆ. ಸರ್ಕಾರದ ನಿಯಮಗಳಂತೆ ಮಹಿಳೆಯರಿಗೆ ಶೇ.33 ರಷ್ಟು, ವಿಶೇಷ ಚೇತನರಿಗೆ ಶೇ.3 ರಷ್ಟು ಆದ್ಯತೆ ನೀಡಲಾಗುವುದು. ತಾಲೂಕಿನಲ್ಲಿ ಒಟ್ಟು 1323 ಹೈನುಗಾರಿಕೆ ಘಟಕ ನಿರ್ಮಾಣದ ಗುರಿ, ಒಟ್ಟು 104 ಮೇವು ಕತ್ತರಿಸುವ ಯಂತ್ರದ ಗುರಿಯನ್ನು ಹೊಂದಲಾಗಿದೆ ಎಂದು ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಸ್ಥಳೀಯ ಸುದ್ದಿಗಳಿಗಾಗಿ ಭೇಟಿ ನೀಡಿ
www.hampitimes.com
epaper.hampitimes.com


5ನೇ ರಾಜ್ಯ ಹಣಕಾಸು ಆಯೋಗದ ಸಭೆಯಲ್ಲಿ ಡಾ.ಸಿ.ನಾರಾಯಣಸ್ವಾಮಿ ಹೇಳಿಕೆ । ಇಲಾಖೆಗಳ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಆಯೋಗದಿಂದ ಶಿಫಾರಸ್ಸು

# ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಿ



**ಹಂಪಿ ಟೈಮ್ಸ್ ಬಳ್ಳಾರಿ**

ಸರ್ಕಾರದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಗ್ರಾಮ ಪಂಚಾಯತಿಗಳ ಅಭಿವೃದ್ಧಿಗೆ ಅಧಿಕಾರಿಗಳು ಶ್ರಮಿಸಬೇಕು, ಪ್ರತಿ ಪಂಚಾಯತಿಗಳಿಂದ ಬರುವ ಆದಾಯವನ್ನು ಅನುದಾನದ ರೂಪದಲ್ಲಿ ಸಾರ್ವಜನಿಕರಿಗೆ ಪ್ರೋತ್ಸಾಹವಾಗಿ ನೀಡಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸಬೇಕು ಎಂದು 5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ನ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ 5ನೇ ರಾಜ್ಯ ಹಣಕಾಸು ಆಯೋಗದ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿವಿಧ ಸರ್ಕಾರಿ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಆಡಳಿತಾತ್ಮಕ ಸಮಸ್ಯೆಗಳನ್ನು ಪರಿಹರಿಸಲು ಆಯೋಗದಿಂದ ಶಿಫಾರಸು ಮಾಡಲಾಗುವುದು. ಕಟ್ಟಡ ತೆರಿಗೆ, ವಾಣಿಜ್ಯ ಮಳಿಗೆಗಳ ತೆರಿಗೆ ಬಾಕಿ ವಸೂಲಾತಿಗಳನ್ನು ಕ್ರಮ ವಹಿಸಬೇಕು ಎಂದರು.

ನಗರದ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳ ಆರ್ಥಿಕ ಸ್ಥಿತಿಗಳನ್ನು ಪರಿಶೀಲಿಸಿ ನಂತರ ಸಂಪನ್ಮೂಲಗಳ ಹಂಚಿಕೆ ಹಾಗೂ ವಿಭಜನೆಯ ಶಿಫಾರಸ್ಸುಗಳ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಆಸ್ತಿ ತೆರಿಗೆ, ಉದ್ದಿಮೆ ಪರವಾನಗಿ, ಬಾಡಿಗೆ ಆದಾಯ, ಬಳಕೆದಾರರ ಶುಲ್ಕ, ಇನ್ನಿತರ ಸಂಗ್ರಹ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಸ್ವಂತ ಸಂಪನ್ಮೂಲ ಕ್ರೋಢೀಕರಣಕ್ಕೆ ನಗರ ಸ್ಥಳೀಯ ಸಂಸ್ಥೆಗಳು, ಪಂಚಾಯತ್ ರಾಜ್ ಸಂಸ್ಥೆಗಳು ಹೆಚ್ಚಿನ ಆದ್ಯತೆ ನೀಡಬೇಕು ಅವರು ತಿಳಿಸಿದರು.

ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ತೆರಿಗೆ ಪಾವತಿ ಖಾತಾ ಪ್ರತಿ ದಾಖಲೆಗಳನ್ನು ತ್ವರಿತವಾಗಿ ನೀಡುವಿಕೆ, ನೀರು ಸರಬರಾಜು, ಒಳಚರಂಡಿ, ಬೀದಿ ದೀಪಗಳು, ಘನತ್ಯಾಜ್ಯ ನಿರ್ವಹಣೆ, ಇನ್ನಿತರ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ವಿವರಿಸಿದರು.

ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಗ್ರಾಮ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಮೂಲ ಸೌಕರ್ಯ ಒದಗಿಸಲು ಹೆಚ್ಚು ಅನುದಾನ, ವಿವಿಧ ಮಂಜೂರು ಅಗತ್ಯತೆ ಸೇರಿದಂತೆ ಬೇರೆ ಬೇರೆ ವಿಷಯಗಳ ಕುರಿತು ಆಯೋಗದ ಅಧ್ಯಕ್ಷರಿಗೆ ವಿನಂತಿಸಿದರು.

ಈ ಸಂದರ್ಭದಲ್ಲಿ 5ನೇ ರಾಜ್ಯ ಹಣಕಾಸು ಆಯೋಗದ ಸದಸ್ಯರಾದ ಮೊಹಮ್ಮದ್ ಸನಾವುಲ್ಲಾ, ಆರ್.ಎಸ್.ಪೊಂಡೆ, ಆಪ್ತ ಕಾರ್ಯದರ್ಶಿ ಕೆ.ಯಾಲಕ್ಕಿಗೌಡ, ಸಮಾಲೋಚಕರಾದ ಎಂ.ಕೆ ಕೆಂಪೇಗೌಡ, ಸಿ.ಜಿ.ಸುಪ್ರಸನ್ನ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ, ಬಳ್ಳಾರಿ ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್, ವಿಜಯನಗರ ಜಿಪಂ ಸಿಇಒ ಎನ್.ಎಂ. ಅಲಿ ಅಕ್ರಮ್ ಶಾ, ಬಳ್ಳಾರಿ ಮಹಾನಗರ ಪಾಲಿಕೆ ಮೇಯರ್ ಮುಲ್ಲಂಗಿ ನಂದೀಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳಿದ್ದರು.

# ಪ್ರತಿದಿನ ತಪ್ಪದೇ ಶಾಲೆಗೆ ಬರಬೇಕು

**ಹಂಪಿ ಟೈಮ್ಸ್ ಬಳ್ಳಾರಿ**

ಮಕ್ಕಳು ದಿನಾಲೂ ಶಾಲೆಗೆ ಬರಬೇಕು. ಯಾವುದೇ ಕಾರಣಕ್ಕೂ ಶಾಲೆಗೆ ತಪ್ಪಿಸಬಾರದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಮಧು ಬಂಗಾರಪ್ಪ ಅವರು ಹೇಳಿದರು.

ನಗರದ ಪಟೇಲ್ ನಗರ ಬಡಾವಣೆಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, 7 ತರಗತಿಯ ಮಕ್ಕಳೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು. ಮನೆಯಲ್ಲಿ ಶಾಲೆಗೆ ಹೋಗಲು ಅಡ್ಡಿಪಡಿಸಿದರೆ, ನಾನು ತಪ್ಪದೇ ಶಾಲೆಗೆ ಹೋಗುತ್ತೇನೆ ಎಂದು ಹೇಳಬೇಕು. ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ಪಡೆಯಬೇಕು. ಆರೋಗ್ಯದಿಂದಿರಬೇಕು. ಶಿಕ್ಷಣ ಪಡೆದುಕೊಂಡು ಉನ್ನತ ವ್ಯಕ್ತಿಗಳಾಗಿ ಹೊರ ಹೊಮ್ಮಬೇಕು ಎಂದು ಸಚಿವರು ಆಶಿಸಿದರು.

**ಸಂವಿಧಾನ ಪೀಠಿಕೆ ಪ್ರಸ್ತುತಪಡಿಸಿದ ರಿತಿಕಾ:**

ವಿದ್ಯಾರ್ಥಿಗಳಿಗೆ ಸಂವಿಧಾನ ಪೀಠಿಕೆ ಯಾರೂ ಹೇಳುತ್ತೀರಾ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಎಸ್.ಮಧು ಬಂಗಾರಪ್ಪ ಅವರು ಕೇಳಿದಾಗ, ಶಾಲೆಯ ಐದನೇ ತರಗತಿ ವಿದ್ಯಾರ್ಥಿನಿ ರಿತಿಕಾ ಅವರು ಸಂವಿಧಾನ ಪೀಠಿಕೆಯನ್ನು ವಿಸ್ತಾರವಾಗಿ ವಾಚನ ಮಾಡಿದರು.

**ಮಕ್ಕಳೊಂದಿಗೆ ಊಟ ಸವಿದ ಸಚಿವರು:**

ಶಾಲೆಯ ವಿವಿಧ ಕೊಠಡಿಗಳಿಗೆ ಭೇಟಿ ನೀಡಿ



ಪರಿಶೀಲನೆ ನಡೆಸಿದ ಸಚಿವರು, ಬಳಿಕ ಮಕ್ಕಳೊಂದಿಗೆ ಮಧ್ಯಾಹ್ನದ ಬಿಸಿಯೂಟ ಸವಿದರು. ಊಟದಲ್ಲಿ ಅನ್ನ, ಸಾಂಬಾರು ಜೊತೆಗೆ ಉಪ್ಪಿನಕಾಯಿ ಮತ್ತು ಮೊಟ್ಟೆ ನೀಡಲಾಗಿತ್ತು. ಇದೇ ವೇಳೆ ಊಟದ ರುಚಿಯ ಬಗ್ಗೆ ಮಕ್ಕಳ ಅಭಿಪ್ರಾಯ ಪಡೆದುಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಪರ ಆಯುಕ್ತ ಡಾ.ಆಕಾಶ್ ಶಂಕರ್, ಡಿಡಿಪಿಐ ಬಿ.ಉಮಾದೇವಿ, ವಿಷಯ ಪರಿವೀಕ್ಷಕಿ ವೇದಾವತಿ, ಶಾಲೆಯ ಮುಖ್ಯಗುರುಗಳಾದ ಜಯಶ್ರೀ ಸೇರಿದಂತೆ ಬಿಇಒ, ಎಸ್‌ಡಿಎಂಸಿ ಅಧ್ಯಕ್ಷರು, ಶಾಲಾ ಶಿಕ್ಷಕರು, ಶಾಲಾ ಶಿಕ್ಷಕರು ಇತರರು ಇದ್ದರು.

# 1008 ಶಾಲೆಗಳಲ್ಲಿ ಎಲ್.ಕೆ.ಜಿ – ಯು.ಕೆ.ಜಿ ತರಗತಿ

ರಾಜ್ಯದ ಎಲ್ಲಾ ಪ್ರಾಥಮಿಕ, ಪ್ರೌಢ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಮಕ್ಕಳ ಕಲಿಕೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಎಸ್.ಮಧು ಬಂಗಾರಪ್ಪ ಅವರು ಹೇಳಿದರು.

ಸೋಮವಾರ, ನಗರದ ಬಿಪಿಎಸ್ಸಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ರಾಜ್ಯದಲ್ಲಿ ಶಿಕ್ಷಣದ ಗುಣಮಟ್ಟ ಕಾಪಾಡುವಲ್ಲಿ ನಮ್ಮ ಸರ್ಕಾರವು ಬದ್ಧವಾಗಿದೆ. ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ವಿಶೇಷ ಜವಾಬ್ದಾರಿ ವಹಿಸಲಾಗಿದ್ದು, ಶಾಲಾ ಸಮಯ ಹೊರತುಪಡಿಸಿ, ಸಂಜೆ ಸಮಯದಲ್ಲೂ ಮಕ್ಕಳಿಗೆ ವಿಶೇಷ ತರಗತಿಗಳ ಮೂಲಕ ಅಭ್ಯಾಸಿಸಲು ಮಾರ್ಗದರ್ಶನ ಮಾಡುತ್ತಿದ್ದಾರೆ ಎಂದರು.

ಪರೀಕ್ಷಾ ಪಾವಿತ್ರ್ಯತೆ ಕಾಪಾಡಲು ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾ, ವೆಬ್ ಕಾಸ್ಟಿಂಗ್ ಮಾಡಲಾಗುತ್ತಿದೆ. ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಮಕ್ಕಳಿಗೆ ಪರೀಕ್ಷೆ ಎದುರಿಸಲು ಮೂರು ಬಾರಿ ಅವಕಾಶ ನೀಡಲಾಗಿದೆ. ಇಲ್ಲಿಯೂ ಉತ್ತೀರ್ಣರಾಗದಿದ್ದರೆ ಅಂತಹ ಮಕ್ಕಳಿಗೆ ಶಾಲೆಗಳಲ್ಲಿ ಪುನಃ ಪ್ರವೇಶಾತಿ ಪಡೆಯಲು ಅವಕಾಶ ನೀಡಲಾಗಿದೆ. ಅಲ್ಲಿಯೂ ಸಹ ಎಲ್ಲಾ ಮಕ್ಕಳಂತೆ ಬಟ್ಟೆ, ಪುಸ್ತಕ, ಶೂ ಹಾಗೂ ಇತರೆ ಸೌಲಭಗಳನ್ನು ಸಹ ನೀಡಲಾಗುತ್ತಿದೆ ಎಂದು ತಿಳಿಸಿದರು.

ಈಗಾಗಲೇ ರಾಜ್ಯದಲ್ಲಿ ಎರಡನೇ ಹಂತದ ಪರೀಕ್ಷೆಗಳು ಮುಕ್ತಾಯಗೊಂಡಿದ್ದು, ಇದರಲ್ಲಿ ಅನುತ್ತೀರ್ಣರಾದ ಮತ್ತು ಶೇಕಡವಾರು ಫಲಿತಾಂಶ ಹೆಚ್ಚಿಸಿಕೊಳ್ಳಲು ನೋಂದಾಯಿಸಿಕೊಂಡ ಮಕ್ಕಳಲ್ಲಿ ಒಟ್ಟಾರೆ 84 ಸಾವಿರ ಮಕ್ಕಳು (ಶೇ.98.25 ರಷ್ಟು) ಉತ್ತೀರ್ಣರಾಗಿದ್ದಾರೆ ಎಂದು ಸಚಿವರು ವಿವರಿಸಿದರು.

ರಾಜ್ಯದ ಶಾಲೆಗಳಲ್ಲಿ ಮುಖಚಹರೆ ಆಧಾರಿತ ಹಾಜರಾತಿ ಕಡ್ಡಾಯವಾಗಿ ಮಾಡಲಾಗುತ್ತಿದ್ದು, ಈಗಾಗಲೇ ಈ ಕುರಿತು ಪ್ರಾಯೋಗಿಕ ಹಂತ ನಡೆಸಲಾಗಿದೆ ಎಂದರಲ್ಲದೇ, ಅಜೀಂ ಪ್ರೇಮ್ ಜೀ, ಇನ್ಫೋಸಿಸ್ ಹಾಗೂ ವಿವಿಧ ಸಂಸ್ಥೆಗಳ ಸಿಎಸ್‌ಆರ್ ಅನುದಾನ ಬಳಸಿಕೊಂಡು ಮಕ್ಕಳ ಆರೋಗ್ಯದ ಪೌಷ್ಟಿಕತೆ, ಗುಣಮಟ್ಟ ಶಿಕ್ಷಣಕ್ಕೆ ಶಿಕ್ಷಕರಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದವರು ಸಹ ಶಾಲೆಗೆ ಕೊಡುಗೆ ನೀಡಬೇಕು ಎಂದರು.

ದೇಶದ ಭವಿಷ್ಯವು ಮಕ್ಕಳ ಶಿಕ್ಷಣದ ಬುನಾದಿಯಲ್ಲಿದೆ. ಹಾಗಾಗಿ ನಮ್ಮ ಸರ್ಕಾರವು ಶಾಲೆಗಳಿಗೆ ಮೂಲಭೂತ ಸೌಕರ್ಯ, ಗುಣಮಟ್ಟ ಶಿಕ್ಷಣದ ಬೋಧನೆಗೆ ಆದ್ಯತೆ ನೀಡಲಾಗುತ್ತಿದೆ. ಈ ನಿಟ್ಟಿನಲ್ಲಿ ಮುಂಬರುವ ದಿನಗಳಲ್ಲಿ 13 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗುವುದು. ಇದಕ್ಕೆ ಮುಖ್ಯಮಂತ್ರಿಯವರು ಸಮ್ಮತಿ ನೀಡಿದ್ದಾರೆ ಎಂದು ತಿಳಿಸಿದರು.

ಈ ಬಾರಿ ಬಜೆಟ್ ನಲ್ಲಿ ಶಾಲಾ ಶಿಕ್ಷಣ ಇಲಾಖೆಗೆ 41 ಸಾವಿರ ಕೋಟಿ ರೂ. ಅನುದಾನ ನೀಡಲಾಗಿದೆ. 1008 ಶಾಲೆಗಳಲ್ಲಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ತರಗತಿ ಪ್ರಾರಂಭಿಸಲಾಗಿದೆ. ರಾಜ್ಯದಲ್ಲಿ ಶಾಲೆಗಳ ಶಿಥಿಲ ಕೊಠಡಿಗಳ ದುರಸ್ತಿಗೆ ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳು ಸಾಕಷ್ಟು ಪ್ರಭಾವ ಬೀರುತ್ತಿವೆ. ಈ ಶಾಲೆಗಳಲ್ಲಿ ಗುಣಮಟ್ಟ ಶಿಕ್ಷಣ ಲಭಿಸುತ್ತಿದ್ದು, ದಾಖಲಾತಿಗೆ ಬೇಡಿಕೆ ಹೆಚ್ಚುತ್ತಿದೆ. ಮಕ್ಕಳ ಭವಿಷ್ಯಕ್ಕೆ ಎಲ್ಲಾ ಸೌಲಭ್ಯ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ. ವಿದ್ಯಾರ್ಥಿಗಳು ಪರೀಕ್ಷೆಗಳಿಗೆ ಭಯಭೀತರಾಗ 'ಬಾರದು. ಈ ಹಿಂದೆ ಅವಕಾಶದ ಕೊರತೆಯಿಂದ ವಿದ್ಯಾರ್ಥಿಗಳು ಅನುತ್ತೀರ್ಣರಾಗುತ್ತಿದ್ದರು. ಈಗ ಎಲ್ಲಾ ರೀತಿಯ ಅನುವು ಮಾಡಿಕೊಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ಬಿಪಿಎಸ್‌ಸಿ ವಿದ್ಯಾಸಂಸ್ಥೆಯ ಅಧ್ಯಕ್ಷ ಮಹಿಪಾಲ್ ಸೇರಿದಂತೆ ವಿವಿಧ ಮುಖಂಡರು ಹಾಜರಿದ್ದರು.

# ರಂಗ ಶಿಕ್ಷಣ ಡಿಪ್ಲೋಮಾಕ್ಕೆ ಆಸಕ್ತರಿಂದ ಅರ್ಜಿ ಅಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

ಶ್ರೀಶಿವಕುಮಾರ ರಂಗ ಪ್ರಯೋಗ ಶಾಲೆಯ 2025-26 ನೇ ಸಾಲಿನ ರಂಗಶಿಕ್ಷಣಕ್ಕೆ (ಡಿಪ್ಲೋಮಾ ಇನ್ ಡ್ರಾಮಾ ಆರ್ಟ್ಸ್)ಗೆ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ ಎಂದು ಸಾಣೇಹಳ್ಳಿಯ ಶ್ರೀಶಿವಕುಮಾರ ರಂಗಪ್ರಯೋಗ ಶಾಲೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಪ್ರವೇಶಕ್ಕೆ ಕನಿಷ್ಠ ವಿದ್ಯಾರ್ಹತೆ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು. ಪದವಿಧರರಿಗೆ ಆದ್ಯತೆ ನೀಡಲಾಗುವುದು. ರಂಗಭೂಮಿಯಲ್ಲಿ ಆಸಕ್ತಿಯಿದ್ದು, ಸ್ವಲ್ಪಮಟ್ಟಿನ ಅನುಭವ ಇರಬೇಕಾದದ್ದು ಅಗತ್ಯ. ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಉಚಿತ ಊಟ, ವಸತಿ ಸೌಲಭ್ಯವಿದೆ. ಕರ್ನಾಟಕ ಹಾಗೂ ಭಾರತದ ರಂಗತಜ್ಞರಿಂದ ಮತ್ತು ಅತಿಥಿ ಉಪನ್ಯಾಸಕರಿಂದ ತರಗತಿಗಳು ನಡೆಯುತ್ತವೆ. ಗ್ರಂಥ ಭಂಡಾರ ಹಾಗೂ ದೃಶ್ಯ, ಶ್ರವ್ಯ ಪರಿಕರಗಳ ಅನುಕೂಲತೆ ಇದೆ. ರಂಗ ಶಾಲೆಯ ವಿದ್ಯಾರ್ಥಿಗಳಿಗೆ ಭಾರತೀಯ ರಂಗಭೂಮಿ, ಕನ್ನಡ ಮತ್ತು ನಾಟಕ ಸಾಹಿತ್ಯ ಪರಂಪರೆ, ಪಾಶ್ಚಾತ್ಯ ರಂಗಭೂಮಿ, ಆಹಾರ್ಯ, ಶಿಕ್ಷಣದಲ್ಲಿ ರಂಗಭೂಮಿ ಕುರಿತಾದ ಸೈದ್ಧಾಂತಿಕ ಮತ್ತು ಪ್ರಾಯೋಗಿಕ ತರಗತಿಗಳು ನಡೆಯುತ್ತವೆ. ಅರ್ಜಿಗಾಗಿ ರಂಗಶಾಲೆಯ ವೆಬ್‌ಸೈಟ್ www.theatreschoolsanehalli.org ನಲ್ಲಿ ಪ್ರವೇಶ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಜೂ.25 ರೊಳಗಾಗಿ ಅರ್ಜಿಯನ್ನು ಭರ್ತಿ ಮಾಡಿ ಪ್ರಾಚಾರ್ಯರು ಶ್ರೀಶಿವಕುಮಾರ ರಂಗಪ್ರಯೋಗ ಶಾಲೆ, ಸಾಣೇಹಳ್ಳಿ, ಹೊಸದುರ್ಗ ತಾಲೂಕು, ಚಿತ್ರದುರ್ಗ ಜಿಲ್ಲೆ -577515 ವಿಳಾಸಕ್ಕೆ ಕಳುಹಿಸಬೇಕು. ಜೂ.27, 28 ರಂದು ಸಂದರ್ಶನವನ್ನು ನಡೆಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.18 ನೇರ ಸಂದರ್ಶನ

**ಹಂಪಿ ಟೈಮ್ಸ್ ಬಳ್ಳಾರಿ**

ಹೊಸಪೇಟೆಯ ಬಳ್ಳಾರಿ ಮೋಟರ್ಸ್ (ಹೊಸಪೇಟೆಯ ಸಂಕಲಾಪುರಹಳ್ಳಿಯ 22ನೇ ವಾರ್ಡ್‌ನ ಇಂಡಿಯನ್ ಪೆಟ್ರೋಲ್ ಬಂಕ್ ಪಕ್ಕದಲ್ಲಿ) ಇಲ್ಲಿ ಜೂ.18 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 02 ಗಂಟೆಯವರೆಗೆ ನೇರ ಸಂದರ್ಶನ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ಇಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದು, ಈ ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ. ವಿದ್ಯಾರ್ಹತೆ: ಐಟಿಐ, ಡಿಪ್ಲೋಮಾ (ಆಟೋಮೋಬೈಲ್ಸ್, ಡಿಸೇಲ್ ಮೆಕಾನಿಕಾಲ್, ಮೆಕಾನಿಕಾಲ್, ಟರ್ನರ್, ವೆಲ್ಡರ್) ವಿದ್ಯಾರ್ಹತೆ ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ, ಇದರ ಸದುಪಯೋಗ ಪಡೆದುಕೊಳ್ಳಬೇಕು. ಪುರುಷರಿಗೆ ಮಾತ್ರ ಅವಕಾಶ.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಮತ್ತು ಸ್ವ-ವಿವರ (ಬಯೋಡೇಟಾ) ಗಳೊಂದಿಗೆ ಅಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.9742718891, 9663263086, 9900827768, 6360408094 ಗೆ ಸಂಪರ್ಕಿಸಬಹುದು.

# ಜೂ.20 ಯೋಗ ಜಾಥಾ

**ಹಂಪಿ ಟೈಮ್ಸ್ ಬಳ್ಳಾರಿ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ವತಿಯಿಂದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂ.20 ರಂದು ಬೆಳಿಗ್ಗೆ 08 ಗಂಟೆಗೆ ನಗರದ ಕನಕದುರ್ಗಮ್ಮ ದೇವಸ್ಥಾನದಲ್ಲಿ ಯೋಗ ಜಾಥಾ ಹಮ್ಮಿಕೊಳ್ಳಲಾಗಿದೆ. ಜಾಥಾವು ಕನಕದುರ್ಗಮ್ಮ ದೇವಸ್ಥಾನದಿಂದ ಆರಂಭಗೊಂಡು ಎಸ್‌ಪಿ ವೃತ್ತ-ಹೆಚ್.ಆರ್.ಗವಿಯಪ್ಪ ವೃತ್ತ, ಗಡಿಗಿ ಚೆನ್ನಪ್ಪ ವೃತ್ತ -ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ನಡೆಯಲಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

DC & SSLC TOPER TALK
scan to watch video



ಸರ್ಕಾರಿ ಶಾಲೆ, ನಮ್ಮ ಶಾಲೆ
ಗುಣಮಟ್ಟದ ಶಿಕ್ಷಣಕ್ಕೆ ಮೊದಲ ಹೆಜ್ಜೆ
(Government school, our school - the first step towards quality education.)

ಸರ್ಕಾರಿ ಶಾಲೆಗಳಲ್ಲಿ 2025-26ನೇ ಸಾಲಿನ ಪ್ರವೇಶ ಉಚಿತ
FREE Admission

ಬನ್ನಿ, ಬೆಂಬಲಿಸಿ, ಸರ್ಕಾರಿ ಶಾಲೆಗಳನ್ನು ಬಲಪಡಿಸಿ (Come, support, strengthen government schools.) - ಹಂಪಿ ಟೈಮ್ಸ್ ಬಳಗ, ವಿಜಯನಗರ

## ನಿತ್ಯ ಪಂಚಾಂಗ

ಮಾಸ: ಜ್ಯೇಷ್ಠ । ಸಂವತ್ಸರ: ವಿಶ್ವವಸು

**17–06–2025 – ಮಂಗಳವಾರ**

| | |
|---|---|
| ತಿಥಿ | : ಷಷ್ಠಿ |
| ಪಕ್ಷ | : ಕೃಷ್ಣ |
| ನಕ್ಷತ್ರ | : ಶತಭಿಷ |
| ಯೋಗ | : ವಿಷ್ಕುಂಭ |
| ಕರಣ | : ವಾಣಿಜ |
| ಸೂರ್ಯೋದಯ | : 05:42:32 |
| ಸೂರ್ಯಾಸ್ತ | : 19:13:22 |
| ರಾಹು ಕಾಲ | : 15:51–17:32 |
| ಯಮಘಂಡ ಕಾಲ | : 09:05–10:47 |
| ಗುಳಿಕ ಕಾಲ | : 12:28–14:09 |

## ತುಂಗಭದ್ರಾ ನೀರಿನ ಮಟ್ಟ



ಸೋಮವಾರ : 16–06–2025

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1604.49 ಅಡಿ |
| ಒಳ ಹರಿವು | 12278 ಕ್ಯುಸೆಕ್ |
| ಹೊರ ಹರಿವು | 180 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 27.908 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |

ಕಳೆದ ವರ್ಷ ಇದೇ ದಿನ

| | |
|---|---|
| ಇಂದಿನ ಮಟ್ಟ | 1583.03 ಅಡಿ |
| ಒಳ ಹರಿವು | 1619 ಕ್ಯುಸೆಕ್ |
| ಹೊರ ಹರಿವು | 577 ಕ್ಯುಸೆಕ್ |
| ಸಾಮರ್ಥ್ಯ | 6.105 ಟಿಎಂಸಿ |

## ಜೂ.17 ಪ್ರಗತಿ ಪರಿಶೀಲನಾ ಸಭೆ.

**ಹಂಪಿ ಟೈಮ್ಸ್ ಹೊಸಪೇಟೆ**

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರು ಮತ್ತು ಎಲ್ಲಾ ಸದಸ್ಯರುಗಳು ಜೂ.17 ರಂದು ಬೆ.9 ಗಂಟೆಯಿಂದ ಮಧ್ಯಾಹ್ನ 1:30 ರವರೆಗೆ ಮಕ್ಕಳ ಸಂಸ್ಥೆಗಳಿಗೆ ಭೇಟಿ ನೀಡಲಿದ್ದಾರೆ. ಹಾಗೂ ಮಧ್ಯಾಹ್ನ 2:30 ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧ್ಯಕ್ಷರು ಮತ್ತು ಎಲ್ಲಾ ಸದಸ್ಯರ ಉಪಸ್ಥಿತಿಯಲ್ಲಿ ಆರ್.ಟಿಇ–2009, ಪೋಕ್ಸೋ–2012 ಹಾಗೂ ಬಾಲ ನ್ಯಾಯ ಕಾಯಿದೆ–2015 ರ ಅನುಷ್ಠಾನದ ಕುರಿತು ಜಿಲ್ಲಾ ಮತ್ತು ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮಕ್ಕಳಪಾಲನಾ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಮಕ್ಕಳಿಗೆ ಸಂಬಂಧಿಸಿದ ಕಾರ್ಯಕ್ರಮ, ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುದೀಪ್ ಉಂಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ:**

ಜಿಲ್ಲೆಯಲ್ಲಿ ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ ಪರಿಸರ ಸಂರಕ್ಷಣೆ, ಕಲೆ ಮತ್ತು ಸಂಸ್ಕೃತಿ ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ಮಾಡಿದ ಅರ್ಹ ಮಕ್ಕಳಿಂದ ಪ್ರಸ್ತಕ ಸಾಲಿನ ರಾಷ್ಟ್ರೀಯ ಪ್ರಧಾನಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅನ್‌ಲೈನ್ ಮೂಲಕ ಃಣಣಠಿ:// ಚಿತಿಚಿಡಿಜ.ರಿಠತಿ.ಟಿ ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ.

2025 ನೇ ಜುಲೈ 31 ಕ್ಕೆ ಅನ್ವಯವಾಗುವಂತೆ 05 ವರ್ಷ ಮೇಲ್ಪಟ್ಟ ಹಾಗೂ 18 ವರ್ಷದೊಳಗಿರುವ ಸಾಧನೆ ಮಾಡಿರುವ ಎಲ್ಲಾ ಮಕ್ಕಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ನಗರದ ಕಂಟೋನ್ಮೆಂಟ್‌ನ ಶಾಂತಿಧಾಮ ಆವರಣದ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಚೇರಿ ಅಥವಾ ದೂ.08392–241373 ಗೆ ಸಂಪರ್ಕಿಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನೆ । ಸಚಿವ ಎಸ್.ಮಧು ಬಂಗಾರಪ್ಪ ಹೇಳಿಕೆ

# ಪ್ರತಿ ಅಧಿಕಾರಿ ಒಂದು ಮಗುವನ್ನು ಸರ್ಕಾರಿ ಶಾಲೆಗೆ ಸೇರಿಸಿ ಎಸ್ಸೆಸ್ಸೆಲ್ಸಿ ಉತ್ತಮ ಫಲಿತಾಂಶ ತರುವುದೇ ನಿಮ್ಮ ಕೊಡುಗೆಯಾಗಲಿ

**ಹಂಪಿ ಟೈಮ್ಸ್ ಬಳ್ಳಾರಿ**

ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಫಲಿತಾಂಶವು ನಿಗದಿತ ಗುರಿ ತಲುಪಬೇಕೆನ್ನುವುದು ಮುಖ್ಯಮಂತ್ರಿಯವರ ಆಶಯವಾಗಿದ್ದು, ಅದರಂತೆ ಬಳ್ಳಾರಿ ಜಿಲ್ಲೆಯು ಸಹ ಉತ್ತಮ ಫಲಿತಾಂಶ ಪಡೆಯಲು ಅಧಿಕಾರಿಗಳು ಶ್ರಮಿಸಬೇಕು. ಇದೇ ಸರ್ಕಾರಕ್ಕೆ ನೀವು ನೀಡುವ ಕೊಡುಗೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್.ಮಧು ಬಂಗಾರಪ್ಪ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅಧಿಕಾರಿಗಳು ಉತ್ತಮ ಫಲಿತಾಂಶಕ್ಕೆ ಈಗಿನಿಂದಲೇ ಕಾರ್ಯಯೋಜನೆ ರೂಪಿಸಬೇಕು. ಹಂತ–ಹಂತವಾಗಿ ಅದನ್ನು ಕಾರ್ಯರೂಪಕ್ಕೆ ತರಬೇಕು. ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಅಡಿಪಾಯ ಹಾಕಿದಂತಾಗುತ್ತದೆ. ಕೊನೆಯ ಸಮಯದಲ್ಲಿ ಗೊಂದಲದಲ್ಲಿ ಅನುಷ್ಠಾನಗೊಳಿಸುವುದಲ್ಲ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಕ್ಕಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸವಾಗಬೇಕು. ಅಧಿಕಾರಿಗಳು ಶಾಲೆಗಳನ್ನು ದತ್ತು ರೀತಿಯಲ್ಲಿ ಕಾಳಜಿ ವಹಿಸಬೇಕು. ಇದರಿಂದ ಶಾಲೆಗಳು ಅಭಿವೃದ್ಧಿ ಹೊಂದುತ್ತವೆ ಮತ್ತು ಒಳ್ಳೆಯ ಫಲಿತಾಂಶವು ಲಭಿಸುತ್ತದೆ ಎಂದರು.

ಜಿಲ್ಲೆಯ ಎಲ್ಲಾ ಶಾಲೆಗಳಿಗೂ ಉಚಿತ ವಿದ್ಯುತ್ ಸಂಪರ್ಕ ಕಲ್ಪಿಸಿದೆ. ಇದರಿಂದ ಕಂಪ್ಯೂಟರ್ ಶಿಕ್ಷಣವೂ ಲಭಿಸುತ್ತಿದೆ. ಸಂಜೆಯ ವೇಳೆಯಲ್ಲಿ ವಿಶೇಷ ತರಗತಿ ನಡೆಸಲು ಅನುಕೂಲವಾಗುತ್ತಿದೆ. ಈ ಕುರಿತು ಸಾಕಷ್ಟು ಪ್ರಚಾರ ಮಾಡಬೇಕು. ಮಕ್ಕಳು ಹೆಚ್ಚಿನ ವಿದ್ಯಾಭ್ಯಾಸ ಹೊಂದಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಶಾಲೆ ಬಿಟ್ಟ ಮಕ್ಕಳನ್ನು ಮನೆಗೆ ಹೋಗಿ ಕರೆತರುವ ಕೆಲಸ ಮಾಡಬೇಕು. ಮುಖ್ಯವಾಗಿ ಉನ್ನತ ಅಧಿಕಾರಿಗಳು ಶಾಲೆ ಬಿಟ್ಟ ಮಕ್ಕಳ ಮನೆಗೆ ಭೇಟಿ ನೀಡಿ, ಅವರನ್ನು ತಮ್ಮ ಸರ್ಕಾರಿ ವಾಹನ(ಕಾರ್) ಮೂಲಕ



ಕರೆತಂದರೆ ಆ ಮಗುವಿಗೆ ನಾನು ವಿದ್ಯಾಭ್ಯಾಸ ಪಡೆಯಬೇಕೆಂಬ ಹಂಬಲ ಹುಟ್ಟಿಕೊಳ್ಳುತ್ತದೆ. ನಂತರ ಕರೆತಂದ ಅಧಿಕಾರಿಯೂ ಸಹ ಆ ಮಗುವಿನ ಮೇಲೆ ಹೆಚ್ಚಿನ ಕಾಳಜಿ ಕುರಿತು ವಿಚಾರಿಸತೊಡಗುತ್ತಾನೆ. ಇದರಿಂದ ಸುತ್ತ–ಮುತ್ತಲಿನ ಪೋಷಕರು ಸಹ ತಮ್ಮ ಮಕ್ಕಳನ್ನು ಶಾಲೆಗಳಿಗೆ ಕಳುಹಿಸಲು ಮುಂದೆ ಬರುತ್ತಾರೆ. ಶಿಕ್ಷಣ ಇಲಾಖೆಯಲ್ಲಿ 6 ಸಾವಿರಕ್ಕೂ ಹೆಚ್ಚು ಅಧಿಕಾರಿಗಳಿದ್ದು, ಒಬ್ಬೊಬ್ಬರು ಒಂದು ಮಗುವನ್ನು ಸರ್ಕಾರಿ ಶಾಲೆಗೆ ದಾಖಲಿಸಿದರೆ, ದಾಖಲಾತಿ ಪ್ರಮಾಣವೇ ಹೆಚ್ಚಳವಾಗುತ್ತದೆ. ಈ ಕುರಿತು ಅಧಿಕಾರಿಗಳು ಒಮ್ಮೆ ಯೋಚಿಸಬೇಕು ಎಂದು ಸಚಿವರು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಜಿಲ್ಲೆಯ ಗಡಿಭಾಗದ ಗ್ರಾಮಗಳಲ್ಲಿ ಜನರು ಗೂಳೆ ಹೋಗದಂತೆ ನೋಡಿಕೊಳ್ಳಬೇಕು. ಅದಕ್ಕಾಗಿಯೇ ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಇವುಗಳ ಪ್ರಯೋಜನ ಅವರು ಪಡೆಯುವಂತರಾಗಬೇಕು. ಇದರಿಂದ ಆ ಕುಟುಂಬದ ಮಕ್ಕಳು ಸಹ ಶಾಲೆ ತಪ್ಪಿಸುವುದಿಲ್ಲ ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ.ಆಕಾಶ್ ಶಂಕರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಈಗಾಗಲೇ ಶೇ.94 ರಷ್ಟು ಪಠ್ಯಪುಸ್ತಕ ಸರಬರಾಜು ಮಾಡಲಾಗಿದೆ. ಜಿಲ್ಲೆಯಲ್ಲಿ 8 ಸಾವಿರ (9 ಮತ್ತು 10 ನೇ ತರಗತಿ) ವಿದ್ಯಾರ್ಥಿಗಳು ಎನ್.ಎಸ್.ಕ್ಯೂ.ಎಫ್ ಐಟಿ ವಿಷಯ ಓದುತ್ತಿದ್ದಾರೆ ಎಂದು ಸಭೆಗೆ ತಿಳಿಸಿದರು.

ಡಾ.ಆಕಾಶ್ ಶಂಕರ್ ಅವರು ಮಾತನಾಡಿ, "ನನ್ನ ಶಾಲೆ–ನನ್ನ ಜವಾಬ್ದಾರಿ" ಕಾರ್ಯಕ್ರಮದಡಿ ಜಿಲ್ಲೆಯ 719 ಶಾಲೆಗಳಲ್ಲಿ ವಿವಿಧ ಶಾಲೆಗಳು ಸೇರಿ 718 ವಾಟ್ಸ್ ಆಪ್ ಗುಂಪುಗಳನ್ನು ರಚಿಸಲಾಗಿದೆ. ಅದೇರೀತಿಯಾಗಿ "ನಮ್ಮ ಶಾಲೆ– ನನ್ನ ಕೊಡುಗೆ" ಕಾರ್ಯಕ್ರಮದಡಿ ಜಿಲ್ಲೆಯ 719 ಶಾಲೆಗಳಲ್ಲಿ 206 ಶಾಲೆಗಳು ಕೊಡುಗೆ ಸ್ವೀಕೃತವಾಗಿವೆ ಎಂದು ಸಭೆಗೆ ತಿಳಿಸಿದರು.

ಇದಕ್ಕೆ ಸಚಿವರು ಪ್ರತಿಕ್ರಿಯಿಸಿ, ಈ ಹಿಂದೆ ಅದೇ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಹಳೆಯ ವಿದ್ಯಾರ್ಥಿಗಳಿಂದ ಶಾಲೆಗಳ ಅಭಿವೃದ್ಧಿಗೆ ದೇಣಿಗೆ ಹಾಗೂ ಕೊಡುಗೆಗಳನ್ನು ಪಡೆಯಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲೆಯ ಶಾಲೆಗಳ ಅಭಿವೃದ್ಧಿ ಕಾಮಗಾರಿ ಮತ್ತು ದುರಸ್ತಿ ಕಟ್ಟಡ ಕಾಮಗಾರಿ, ವಿವಿಧ ಅನುದಾನ ಬಳಕೆಯ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಟಿ.ಪಾಲಾಕ್ಷಿ, ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಉಪನಿರ್ದೇಶಕರಾದ ಲಕ್ಷ್ಮಿ ಕಿರಣ್ ಸೇರಿದಂತೆ ಜಿಲ್ಲೆಯ ಎಲ್ಲಾ ಬಿಇಓ ಅಧಿಕಾರಿಗಳು, ಸಿಆರ್‌ಪಿ, ಬಿಆರ್‌ಪಿ ಅಧಿಕಾರಿಗಳು ಉಪಸ್ಥಿತರಿದ್ದರು.

### ಶಾಲಾ ಆಸ್ತಿ ನೋಂದಣಿಗೆ ಮುತುವರ್ಜಿ ವಹಿಸಿ:

ಜಿಲ್ಲೆಯಲ್ಲಿ ಒಟ್ಟು 633 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು, ಕಳೆದ ವರ್ಷ 362 ಶಾಲೆಗಳ ಆಸ್ತಿ ನೋಂದಣಿ ಮಾಡಲಾಗಿದೆ. ಅದರಲ್ಲಿ 265 ಶಾಲಾ ಆಸ್ತಿ ನೋಂದಣಿ ಬಾಕಿ ಇದ್ದು, ಇದಕ್ಕೆ ಡಿಡಿಪಿಐ ಮತ್ತು ಡಿಡಿಪಿಯು ಅಧಿಕಾರಿಗಳು ಹೊಣೆಗಾರಿಕೆ ಹೊಂದಬೇಕು. ಆಯಾ ವ್ಯಾಪ್ತಿಯ ತಹಶೀಲ್ದಾರ್ ಅವರ ಜೊತೆ ಸಹಭಾಗಿತ್ವ ಹೊಂದಿ ನೋಂದಣಿಗೆ ಆದ್ಯತೆ ವಿಷಯವಾಗಿ ಪರಿಗಣಿಸಲು ಸೂಚಿಸಬೇಕು ಎಂದು ತಿಳಿಸಿದರು.

### ಸಿಎಸ್‌ಆರ್ ಅನುದಾನ ಬಳಸಿ:

ಮುಖ್ಯಮಂತ್ರಿಯವರ ನಿರ್ದೇಶನದಂತೆ, ಶಿಕ್ಷಣ ಇಲಾಖೆಯನ್ನು ಕೆಡಿಪಿ ಸಭೆಯಲ್ಲಿ ಮುಖ್ಯ ವಿಷಯವಾಗಿ ಚರ್ಚಿಸಬೇಕು ಎಂದು ಹೇಳಿದ್ದು, ಎಲ್ಲಾ ಮೂಲಭೂತ ಸೌಕರ್ಯಗಳಿಗೆ ಈ ಇಲಾಖೆಗೆ ಸಾಕಷ್ಟು ಅನುದಾನ ಸರ್ಕಾರ ನೀಡುತ್ತಿದೆ. ಜಿಲ್ಲೆಯಲ್ಲಿ ಸಾಕಷ್ಟು ಕಾರ್ಖಾನೆ ವಲಯಗಳಿದ್ದು, ಅವುಗಳಿಂದ ಬರುವ ಸಿಎಸ್‌ಆರ್ ಅನುದಾನವನ್ನು ಶಾಲೆಗಳ ಅಭಿವೃದ್ಧಿಗೆ ಬಳಸಬೇಕು. ಅವರಿಂದ ಯಾವುದೇ ರೀತಿಯಲ್ಲಾದರೂ ದಾನಪಡೆಯಬೇಕು ಎಂದರು.

# ನಗರಸಭೆಯ ಸಹಾಯ ಧನಕ್ಕೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

2025–26ನೇ ಸಾಲಿನ ಎಸ್.ಎಫ್.ಸಿ. ಯೋಜನೆ ಅಡಿಯಲ್ಲಿ ವ್ಯಕ್ತಿ ಸಂಬಂಧಿತ ಅನುಕೂಲಗಳಿಗೆ ಸಹಾಯ ಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹೊಸಪೇಟೆ ನಗರದ ಎಂ.ಬಿ.ಬಿ.ಎಸ್, ಬಿ.ಇ ವ್ಯಾಸಂಗ ಮಾಡುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಗಾಗಿ ರೂ.50 ಸಾವಿರ ಮೀರದಂತೆ ಹಾಗೂ ಬಡಜನರಿಗೆ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು ಸಹಾಯಧನ ನೀಡಲಾಗುವುದು. ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದ ಕ್ರೀಡೆ, ಕಲೆ, ಸಾಂಸ್ಕೃತಿಕ ಹಾಗೂ ಇತರೆ ವ್ಯಾಸಂಗೇತರ ಚಟುವಟಿಕೆಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವುದು. ಹೊಸಪೇಟೆ ನಗರದ ಸರ್ಕಾರಿ ಶಾಲೆ, ಕಾಲೇಜುಗಳು, ಸರ್ಕಾರದ ವೃತ್ತಿಪರ ಸಂಸ್ಥೆಗಳಲ್ಲಿ ವ್ಯಾಸಾಂಗ ಮಾಡುತ್ತಿರುವ ಅಭ್ಯರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವುದು. ನಗರಸಭೆ ವ್ಯಾಪ್ತಿಯಲ್ಲಿ ಬರುವ ವಿಕಲಚೇತನರಿಗೆ ತ್ರಿಚಕ್ರ ವಾಹನಗಳನ್ನು ನೀಡಲಾಗುತ್ತದೆ. ಫಲಾನುಭವಿಗಳ ಆಯ್ಕೆ ಸಂದರ್ಭದಲ್ಲಿ ಅತಿ ಕಡುಬಡವರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಫಲಾನುಭವಿಗಳು ಕುಟುಂಬದ ಆದಾಯ ಪ್ರಮಾಣ ಪತ್ರ ಹಾಗೂ ಇತರೆ ದಾಖಲಾತಿಗಳನ್ನು ನೀಡಿ ಸಹಾಯ ಧನ ಪಡೆಯಬಹುದಾಗಿದೆ. ಅರ್ಹ ಫಲಾನುಭವಿಗಳು ಜೂ.13 ರಿಂದ ಜುಲೈ.15 ರೊಳಗಾಗಿ ಅರ್ಜಿಯನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ. ಯೋಜನೆಯ ಮಾಹಿತಿ ಹಾಗೂ ಅರ್ಜಿ ನಮೂನೆಯನ್ನು ನಗರಸಭೆ ಕಾರ್ಯಾಲಯದ ವಿಷಯ ನಿರ್ವಾಹಕರಿಂದ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ತಿತಿತಿ.ಥಿಂಜಿಚಿಥಿಚಿಟಿಚಿರ್ಚಿ.ರಿಠತಿ.ಟಿ ಜಿಲ್ಲಾ ವೆಬ್‌ಸೈಟ್ ಅನ್ನು ವೀಕ್ಷಣೆ ಮಾಡಬಹುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈಲು ಹಳಿ ಮೇಲೆ ಅಪರಿಚಿತ ಶವ ಪತ್ತೆ : ಪ್ರಕರಣ ದಾಖಲು

**ಹಂಪಿ ಟೈಮ್ಸ್ ಹೊಸಪೇಟೆ**

ಬಳ್ಳಾರಿ ಮತ್ತು ಕಂಟೋನ್‌ಮೆಂಟ್ ರೈಲು ನಿಲ್ದಾಣಗಳ ಮಧ್ಯೆಭಾಗದಲ್ಲಿ ಜೂ.13 ರಂದು ರೈಲು ಹಳಿಯ ಮೇಲೆ ಸುಮಾರು 30 ವರ್ಷದ ಅಪರಿಚಿತ ವ್ಯಕ್ತಿಯ ಮೃತದೇಹ ಪತ್ತೆಯಾಗಿದ್ದು, ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತ ವ್ಯಕ್ತಿ ಚಹರೆ : 5.6 ಅಡಿ ಎತ್ತರ, ಬಲಗೈ ಮೊಣಕೈ ಮುಂದೆ ಆಂಗ್ಲ ಭಾಷೆಯಲ್ಲಿ GOUTAM ಮತ್ತು ಓಂ ಇರುವ ಹಚ್ಚೆ ಹಾಕಿಸಿಕೊಂಡಿರುತ್ತಾನೆ. ಮೃತವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ರೈಲ್ವೆ ಪೊಲೀಸ್ ಠಾಣೆ, ದೂ.08392–276063 ಅಥವಾ 080–22871291 ಬೆಂಗಳೂರು ರೈಲ್ವೇ ಕಂಟ್ರೋಲ್ ರೂಂಗೆ ಮಾಹಿತಿ ನೀಡಲು ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ಉಪ ನಿರೀಕ್ಷಕ ಜಿ.ನಾಗರಾಜ್ ತಿಳಿಸಿದ್ದಾರೆ.

# ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಸಾಧನೆ ಶೂನ್ಯ

### ಶಾಸಕ ಗಾಲಿ ಜನಾರ್ದನ ರೆಡ್ಡಿ ವ್ಯಂಗ್ಯ । ಸುಳ್ಳು ಹೇಳಿಕೊಂಡು ತಿರುಗುವುದೇ ಸಾಧನೆ

**ಹಂಪಿ ಟೈಮ್ಸ್ ಕೂಡ್ಲಿಗಿ**

ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಎರಡು ವರ್ಷಗಳ ಅವಧಿಯಲ್ಲಿನ ಸಾಧನೆ ಶೂನ್ಯ, ಬರೀ ಸುಳ್ಳುಗಳನ್ನು ಹೇಳಿ ತಿರುಗಾಡುವುದೇ ಅವರ ಸಾಧನೆ ಎಂದು ಗಂಗಾವತಿ ಶಾಸಕ ಗಾಲಿ ಜನಾರ್ಧನ ರೆಡ್ಡಿ ವ್ಯಂಗವಾಡಿದರು.

ಪಟ್ಟಣದ ಎಸ್ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು ನಿವಾಸದಲ್ಲಿ ಸೋಮವಾರ ಬಂಗಾರು ಹನುಮಂತು ತಂದೆ ನಿಧನದ ನಂತರ ಸಾಂತ್ವಾನ ಹೇಳಲು ಪತ್ನಿ ಅರುಣಾ ರೆಡ್ಡಿ ಜತೆ ಆಗಮಿಸಿದ ಹಿನ್ನೆಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ಕಳೆದ 11 ವರ್ಷಗಳ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ದೇಶದಲ್ಲಿ ಅಭೂತಪೂರ್ವ ಕಾರ್ಯಗಳನ್ನು ಮಾಡಿದೆ. ಹೈಟೆಕ್ ರೈಲ್ವೆ ನಿಲ್ದಾಣ ಸೇರಿದಂತೆ 75 ವಿಮಾನ ನಿಲ್ದಾಣಗಳನ್ನು ಮಾಡಿದ್ದು, ಲಕ್ಷಾಂತರ ಕಿ.ಮೀಟರ್ ಸುಸಜ್ಜಿತ ರಸ್ತೆ ಹಾಗೂ ಸೇತುವೆಗಳನ್ನು ಮಾಡಿರುವುದು ಅತಿ ದೊಡ್ಡ ಸಾಧನೆ. ರಾಜ್ಯದಲ್ಲಿ ಮುಂದಿನ ಚುನಾವಣೆಯಲ್ಲಿ ಬಿಜೆಪಿ ಕಾರ್ಯಕರ್ತರನ್ನು ಹುರಿದುಂಬಿಸಿ ರಾಜ್ಯಾದ್ಯಂತ ಪ್ರವಾಸ ಮಾಡಿ ಬಿಜೆಪಿ



ಸರ್ಕಾರವನ್ನು ಅಧಿಕಾರ ಗದ್ದುಗೆ ಹಿಡಿಯಲು ಎಲ್ಲಾ ಮುಖಂಡರ ಜತೆಗೂಡಿ ಸಂಘಟನೆ ಮಾಡಲಾಗುವುದು. ಬಳ್ಳಾರಿ ಹಾಗೂ ವಿಜಯನಗರ ಅವಳಿ ಜಿಲ್ಲೆಯ 11 ವಿಧಾನ ಸಭಾ ಕ್ಷೇತ್ರದಲ್ಲೂ ಬಿಜೆಪಿ ನಿಚ್ಚಳ ಗೆಲುವು ಪಡೆಯಲು ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರ ಜತೆ ಸಂಘಟನೆ ಮಾಡಲಾಗುವುದು ಎಂದು ಭರವಸೆ ನೀಡಿದರು. ಶ್ರೀರಾಮುಲು ಕೂಡ್ಲಿಗಿ ಕ್ಷೇತ್ರದಲ್ಲಿ ಹೆಚ್ಚು ಕಾಣಿಸುತ್ತಿದ್ದು ಇಲ್ಲಿಂದಲೇ ಸ್ಪರ್ಧೆ ಮಾಡುವ ಹಿಂಗಿತ ಇದೆ ಸ್ಥಳೀಯ ಆಕಾಂಕ್ಷಿಗಳ ಕೂಡ ಪ್ರಬಲ ಪೈಪೋಟಿ ಇದೆ ಎಂದು ಪತ್ರಕರ್ತರ ಪ್ರಶ್ನೆಗೆ, ರಾಮುಲು ರಾಜ್ಯ ನಾಯಕರು, ರಾಜ್ಯದ ಎಲ್ಲಾ ಕಡೆ ಸಂಚರಿಸಿ ಪಕ್ಷವನ್ನು ಸಂಘಟಿಸುವ ಕಾರ್ಯ ಮಾಡುತ್ತಿದ್ದಾರೆ. ಚುನಾವಣೆಯಲ್ಲಿ ಸ್ಪರ್ಧೆ ಮಾಡುವುದು ಪಕ್ಷದ ಹಿರಿಯ ನಾಯಕರಿಗೆ ಬಿಟ್ಟ ವಿಚಾರ ಎಂದು ತಿಳಿಸಿದರು.

ಇನ್ನೂ ಅದಿರು ಪ್ರಕರಣ ಈಗಾಗಲೇ ನ್ಯಾಯಾಲಯವು ಕೇಸ್ ಖುಲಾಸೆ ಮಾಡಿದ್ದು, ರಾಜಕೀಯ ಷಡ್ಯಂತ್ರದಿಂದ ವಿನಾಕಾರಣ ನನ್ನ ಬಲಿಪಶು ಮಾಡಿ ಆರೋಪಗಳನ್ನು ಮಾಡುತ್ತಿದ್ದಾರೆ. ಇದರಲ್ಲಿ ಯಾವುದೇ ಹುರುಳಿಲ್ಲ. ಮುಂದಿನ ದಿನಗಳಲ್ಲಿ ಪಕ್ಷದ ಕಾರ್ಯಕರ್ತರು, ಭಗವಂತನ ಆರ್ಶಿವಾದದಿಂದ ಮತ್ತೆ ಸಕ್ರಿಯ ರಾಜಕೀಯ ದಲ್ಲಿ ತೊಡಗುವುದಾಗಿ ತಿಳಿಸಿದರು.

ಈ ಸಂಧರ್ಭದಲ್ಲಿ ಬಿಜೆಪಿ ಎಸ್ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಸೂರ್ಯಪಾಪಣ್ಣ, ಮಾಜಿ ಜಿಪಂ ಸದಸ್ಯ ಹೊಂಬಾಳೆ ರೇವಣ್ಣ, ಚೋರನೂರು ಅಡಿವೆಪ್ಪ, ಉಜ್ಜಿನಿ ಲೋಕಣ್ಣ, ಬೆಳಗಟ್ಟೆ ಕಲ್ಲೇಶ್ ಗೌಡ್ರು, ಬೋರ್ ವೆಲ್ ಮಂಜಣ್ಣ, ಶಂಭಯ್ಯ, ಅಜೇಯ್ ನೀರ್ಕಲ್, ಪಪಂ ಸದಸ್ಯ ಸಚಿನ್ ಕುಮಾರ್ ಸೇರಿದಂತೆ ಅನೇಕರು ಇದ್ದರು.